ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 308 ₹ 4, TUESDAY, 06 FEBRUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

ಕಲ್ಲಿದ್ದಲು ತುಂಬಿದ್ದ ಕಾರ್ಮಿಕರ ಸೈಕಲ್ ನೂಕಿದ ರಾಹುಲ್ ಗಾಂಧಿ

ಜಾರ್ಖಂಡ್: ಭಾರತ ಜೋಡೋ ನ್ಯಾಯ್ ಯಾತ್ರೆ ಯನ್ನು ಕೈಗೊಂಡಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೋಮವಾರ ಜಾರ್ಖಂಡ್‌ನ ರಾಮಗಢ ಜಿಲ್ಲೆಯಲ್ಲಿ 200 ಕೆಜಿ ಕಲ್ಲಿದ್ದಲು ತುಂಬಿದ್ದ ಯುವಕನ ಸೈಕಲ್ ತಳ್ಳಲು ಯತ್ನಿಸಿದ್ದಾರೆ. ಈ ದೃಶ್ಯದ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕವಾಗಿ ಹರಿದಾಡಿವೆ. ರಾಂಚಿಗೆ ತೆರಳುತ್ತಿದ್ದ ದಾರಿ ಮಧ್ಯೆ ತಮ್ಮ ಸೈಕಲ್‌ಗಳಲ್ಲಿ 200ರಿಂದ 250 ಕೆಜಿ ತೂಕದ ಕಲ್ಲಿದ್ದಲನ್ನು ಸಾಗಿಸುತ್ತಿದ್ದ ಕೂಲಿ ಕಾರ್ಮಿಕರನ್ನು ನೋಡಿದ ರಾಹುಲ್ ಗಾಂಧಿ, ಅವರ ಸೈಕಲ್ ತಳ್ಳುವ ಮೂಲಕ ಕಾರ್ಮಿಕರಿಗೆ ಸಹಾಯಹಸ್ತ ನೀಡಿದ್ದಾರೆ. ಈ ಕುರಿತಂತೆ ಟ್ವೀಟ್ ಮಾಡಿದ ಕಾಂಗ್ರೆಸ್, 'ಪ್ರತಿದಿನ ಸುಮಾರು 30–40 ಕಿಲೋಮೀಟರ್ ನಡೆಯಬೇಕು. ಕಠಿಣ ಪರಿಶ್ರಮ ಪಟ್ಟರೂ ಈ ಕೆಲಸದಿಂದ ಬರುವ ಆದಾಯವು ತುಂಬಾ ಕಡಿಮೆ' ಎಂದು ಕಾರ್ಮಿಕರು ಹೇಳಿರುವುದಾಗಿ ತಿಳಿಸಿದೆ. 'ಭಾರತವನ್ನು ಕಟ್ಟುವಲ್ಲಿ ತೊಡಗಿರುವ ಈ ಕಾರ್ಮಿಕರಿಗೆ ಅವರ ಶ್ರಮಕ್ಕೆ ಸಮಾನವಾದ ವೇತನ ಸಿಗಬೇಕು, ಅವರಿಗೆ ನ್ಯಾಯ ಸಿಗಬೇಕು. ಇದು ಯಾತ್ರೆಯ ಗುರಿಯಾಗಿದೆ. ಜನರ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುವುದು, ಅವರ ನೋವನ್ನು ಆಲಿಸುವುದು, ಅವರಿಗೆ ನ್ಯಾಯ ಒದಗಿಸುವುದು' ಯಾತ್ರೆಯ ಉದ್ದೇಶವಾಗಿದೆ ಎಂದು ಪೋಸ್ಟ್‌ನಲ್ಲಿ ಹೇಳಿದೆ.

ತೆರಿಗೆ ಪಾಲು ಹಂಚಿಕೆಯಲ್ಲಿ ಕೇಂದ್ರದಿಂದ 1.87 ಲಕ್ಷ ಕೋಟಿ ಅನ್ಯಾಯ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕರ್ನಾಟಕ ರಾಜ್ಯದಿಂದ ಕೇಂದ್ರಕ್ಕೆ ವಾರ್ಷಿಕ 4.30 ಲಕ್ಷ ಕೋಟಿ ರೂ. ತೆರಿಗೆ, ಸರ್ ಚಾರ್ಜ, ಸೆಸ್ ರೂಪದಲ್ಲಿ ಆದಾಯ ಕ್ರೂಢೀ ಕರಣ ವಾಗುತ್ತಿದೆ. ಅದರಲ್ಲಿ ಶೇ.12ರಷ್ಟನ್ನು ರಾಜ್ಯಕ್ಕೆ ಮರಳಿಸ ಲಾಗುತ್ತಿದ್ದು, ಸುಮಾರು 1,87,867 ಕೋಟಿ ರೂ. ಕಳೆದ ಐದು ವರ್ಷಗಳಿಂದ ನಷ್ಟವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಗಂಭೀರ ಆರೋಪ ಮಾಡಿದ್ದಾರೆ.

ಕೇಂದ್ರದಿಂದ ರಾಜ್ಯಕ್ಕೆ ಆಗಿರುವ ಆರ್ಥಿಕ ತಾರತಮ್ಯ ಕುರಿತಂತೆ ವಿಧಾನಸೌಧದಲ್ಲಿಂದು ಸುದೀರ್ಘ ಪತ್ರಿಕಾಗೋಷ್ಠಿ ನಡೆಸಿ ಎಳೆ ಎಳೆಯಾಗಿ ಮಾಹಿತಿ ಬಿಚ್ಚಿಟ್ಟರು. 2017ರಿಂದ 2023–24ರವರೆಗೆ ಜಿಎಸ್ಟಿ ನಷ್ಟದಿಂದ 59,274 ಕೋಟಿ 15ನೇ ಹಣಕಾಸು ಆಯೋಗದ ತೆರಿಗೆ ಪಾಲು ಹಂಚಿಕೆಯಲ್ಲಿ 62,098 ಕೋಟಿ ಸೆಸ್, ಸರ್ಚಾರ್ಜ್‌ಗಳ ಮೂಲಕ 55,000 ಕೋಟಿ, ವಿಶೇಷ ಅನುದಾನ ಕೊಡದೆ ವಂಚನೆಯಾಗಿರುವುದು 11,495 ಕೋಟಿ ಸೇರಿ ಒಟ್ಟು 1.87 ಲಕ್ಷ ಕೋಟಿ ಆರ್ಥಿಕವಾಗಿ ರಾಜ್ಯಕ್ಕೆ ನಷ್ಟವಾಗಿದೆ ಎಂದು ವಿವರಿಸಿದರು.

2013–14ನೇ ಸಾಲಿನಲ್ಲಿ 1,41,270 ಕೋಟಿ ಸೆಸ್ ಮತ್ತು ಸರ್ಚಾರ್ಜ್‌ಗಳ ಮೊತ್ತ ವಸೂಲಿಯಾಗುತ್ತಿತ್ತು. 2023–24ನೇ ಸಾಲಿಗೆ ಅದು ಐದು ಪಟ್ಟು ಹೆಚ್ಚಾಗಿ, 5,52,789 ಕೋಟಿಯಷ್ಟಾಗಿದೆ. ಆದರೆ ಇದರಲ್ಲಿ ರಾಜ್ಯಕ್ಕೆ ಯಾವುದೇ ಪಾಲು ನೀಡುತ್ತಿಲ್ಲ ಎಂದು ಆಕ್ಷೇಪಿಸಿದರು. ಕೇಂದ್ರ ಸರ್ಕಾರದ ಬಜೆಟ್ 2017–18ನೇ ಸಾಲಿನಲ್ಲಿ 21.46 ಲಕ್ಷ ಕೋಟಿಯಷ್ಟು ಇತ್ತು. ಆಗ 47,990 ಕೋಟಿ ರೂ.ಗಳು ಕೇಂದ್ರದಿಂದ ತೆರಿಗೆ ಪಾಲು ಮತ್ತು ಕೇಂದ್ರದ ಪ್ರಾಯೋಜಿತ ಯೋಜನೆಗಳಡಿ ಬರುತ್ತಿತ್ತು.

2024–25ನೇ ಸಾಲಿಗೆ ಬಜೆಟ್ನ ಗಾತ್ರ 45.03 ಲಕ್ಷ ಕೋಟಿಯಷ್ಟಾಗಿದೆ. ಇದರ ಪ್ರಮಾಣಕ್ಕೆ ಅನುಗುಣವಾಗಿ ರಾಜ್ಯಕ್ಕೆ ಅನುದಾನ ಹೆಚ್ಚಾಗಿಲ್ಲ. ಕೇವಲ 50,257 ಕೋಟಿ ರೂ. ಮಾತ್ರ ದೊರೆತಿದೆ. ಬಜೆಟ್ ಪ್ರಮಾಣಕ್ಕೆ ಅನುಗುಣವಾಗಿ 5 ವರ್ಷಗಳ ಹಿಂದೆ 2.2ರಷ್ಟು ಅನುದಾನ ಹಂಚಿಕೆಯಾಗಿದ್ದು, ಈ ವರ್ಷಕ್ಕೆ 1.23ಕ್ಕೆ ಕುಸಿದಿದೆ.

ಅವೈಜ್ಞಾನಿಕ ಜಿಎಸ್ಟಿಯಿಂದ ರಾಜ್ಯಕ್ಕೆ ಆಗುತ್ತಿರುವ ನಷ್ಟದ ಪರಿಹಾರವನ್ನು ಕೇಂದ್ರ ಸರ್ಕಾರ ಭರ್ತಿ ಮಾಡಿಕೊಡುವುದನ್ನು ನಿಲ್ಲಿಸಿದೆ. ದೇಶದಲ್ಲೇ 2ನೇ ಅತಿಹೆಚ್ಚು ತೆರಿಗೆ ಪಾವತಿಸುವ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯವಾಗುತ್ತಿದೆ. ಆದಾಯ ತೆರಿಗೆ, ಕಾರ್ಪೊರೇಟ್ ತೆರಿಗೆ, ಜಿಎಸ್ಟಿ, ಪೆಟ್ರೋಲ್, ಡೀಸೆಲ್, ಕಸ್ಟಮ್ ತೆರಿಗೆ, ಹೆದ್ದಾರಿ ಟೋಲ್ಗಳು, ಬಂದರು, ವಿಮಾನ ನಿಲ್ದಾಣ, ರೈಲ್ವೆ ನಿಲ್ದಾಣಗಳಿಂದ ಕೇಂದ್ರಕ್ಕೆ 4.37 ಲಕ್ಷ ಕೋಟಿ ರೂ. ಆದಾಯ ರವಾನೆಯಾಗುತ್ತಿದೆ. ಇದರಲ್ಲಿ ಕನಿಷ್ಟವೆಂದರೂ ರಾಜ್ಯಕ್ಕೆ ವರ್ಷಕ್ಕೆ ಒಂದು ಲಕ್ಷ ಕೋಟಿ ರೂ. ಮರುಪಾವತಿಯಾಗಬೇಕಿತ್ತು. 50 ಸಾವಿರ ಕೋಟಿ ರೂ. ನೀಡುವ ಭರವಸೆ ಮಾತ್ರ ದೊರೆತಿದೆ ಎಂದು ವಿಶ್ಲೇಷಿಸಿದರು.

ಕೇಂದ್ರ ಸಚಿವ ನಿರ್ಮಲಾ ಸೀತಾರಾಮನ್ ರಾಜ್ಯದಿಂದಲೇ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ. ಕಳೆದ ಬಜೆಟ್ನಲ್ಲಿ ಭದ್ರ ಮೇಲ್ದಂಡೆಗೆ 5,300 ಕೋಟಿ ಕೆರೆಗಳ ಪುನರ್ ಅಭಿವೃದ್ಧಿಗೆ 3000 ಕೋಟಿ, ಪೆರಿಪರಲ್ ರಿಂಗ್ ರಸ್ತೆ 3000 ಕೋಟಿ, 15ನೇ ಹಣಕಾಸು ಆಯೋಗದ ಮಧ್ಯಂತರ ವರದಿ ಪ್ರಕಾರ 5 ಸಾವಿರ ಕೋಟಿ ಸೇರಿದಂತೆ ಸಾಕಷ್ಟು ಅನುದಾನ ನಿರ್ಮಲಾ ಸೀತಾರಾಮನ್ ಅವರ ಮೂಲಕವೇ ರಾಜ್ಯಕ್ಕೆ ಬಿಡುಗಡೆಯಾಗಬೇಕಿತ್ತು. ಆದರೆ ಅದೆಲ್ಲವನ್ನೂ ತಿರಸ್ಕಾರ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಬಿಜೆಪಿಗೆ ಮನವಿ: ಕೇಂದ್ರದಿಂದ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧ ಫೆ.7ರಂದು ಬೆಳಗ್ಗೆ 11 ಗಂಟೆಗೆ ಜಂತರ್ಮಂತರ್ನಲ್ಲಿ ಕರ್ನಾಟಕದ ಎಲ್ಲಾ ಸಚಿವರು, ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರು, ರಾಜ್ಯಸಭಾ ಸದಸ್ಯರು, ಪ್ರತಿಭಟನೆ ನಡೆಸುತ್ತಿದ್ದೇವೆ. ಇದು ಬಿಜೆಪಿ ವಿರುದ್ಧ ಕಾಂಗ್ರೆಸ್ ನಡೆಸುತ್ತಿರುವ ರಾಜಕೀಯ ಪ್ರತಿಭಟನೆ ಅಲ್ಲ. ಬದಲಾಗಿ ರಾಜ್ಯಕ್ಕಾಗುತ್ತಿರುವ ಅನ್ಯಾಯದ ವಿರುದ್ಧ ಹೋರಾಟ. ಹೀಗಾಗಿ ಬಿಜೆಪಿಯ ಶಾಸಕರು, ಸಂಸದರೂ ಕೂಡ ಪ್ರತಿಭಟನೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ರಾಜ್ಯದಿಂದ ಕೇಂದ್ರದಲ್ಲಿ ಸಚಿವರಾಗಿರುವವರು, 27 ಮಂದಿ ಸಂಸದರು, ಬಿಜೆಪಿಯ ರಾಜ್ಯ ನಾಯಕರಾದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಆರ್.ಅಶೋಕ್ ಸೇರಿದಂತೆ ಯಾರಿಗೂ ಪ್ರಧಾನಮಂತ್ರಿ ನರೇಂದ್ರಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರ ಮುಂದೆ ನಿಂತು ಮಾತನಾಡುವ ಧೈರ್ಯವಿಲ್ಲ. ಹೀಗಾಗಿ ರಾಜ್ಯಕ್ಕೆ ಅನ್ಯಾಯವಾಗುತ್ತಲೇ ಇದೆ. ಇಲ್ಲಿ ಸುಳ್ಳು ಆರೋಪ ಮಾಡುವ ಬದಲು ದೆಹಲಿಗೆ ಬಂದು ನಮ್ಮ ಜೊತೆ ಕೈಜೋಡಿಸಲಿ ಎಂದು ಸವಾಲು ಹಾಕಿದರು.

ಕೇಂದ್ರದಿಂದ ಸಾಲದ ಪ್ರಮಾಣ ಕೂಡ ಹೆಚ್ಚಾಗಿದೆ. ಇದು ಆರ್ಥಿಕ ವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮ ಬೀರಿದೆ.

ನಿವೃತ್ತ ಐಪಿಎಸ್ ಅಧಿಕಾರಿ ಜೆಡಿಎಸ್ ಗೆ ಸೇರ್ಪಡೆ

ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜಕೀಯ ಪಕ್ಷದಲ್ಲಿ ಬಿರುಸಿನ ಚಟುವಟಿಕೆ ಆರಂಭವಾಗಿದೆ. ಟಿಕೆಟ್ ಆಕಾಂಕ್ಷಿಗಳ ಲಾಭಿಯೂ ಜೋರಾಗಿದೆ. ಈ ನಡುವೆ ನಿವೃತ್ತ ಐಪಿಎಸ್ ಅಧಿಕಾರಿ ಜ್ಯೋತಿ ಪ್ರಕಾಶ್ ಮಿರ್ಜಿ ಜೆಡಿಎಸ್ ಗೆ ಸೇರ್ಪಡೆಯಾಗಿದ್ದಾರೆ.

ಜ್ಯೋತಿ ಪ್ರಕಾಶ್ ಮಿರ್ಜಿ ಅವರಿಗೆ ಮಾಜಿ ಮುಖ್ಯಮಂತ್ರಿ, ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ಪಕ್ಷದ ಬಾವುಟ ನೀಡಿ ಬರಮಾಡಿಕೊಂಡರು.

ಜನತಾದಳ ಯುವ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಪಕ್ಷದ ಮಾಜಿ ಅಧ್ಯಕ್ಷ ಹೆಚ್.ಕೆ. ಕುಮಾರಸ್ವಾಮಿ, ಶಾಸಕ ನೇಮಿರಾಜ್ ನಾಯಕ್, ಮಾಜಿ ಸಚಿವ ಅನಿಲ್ ಲಾಡ್ ಮುಂತಾದವರು ಉಪಸ್ಥಿತರಿದ್ದರು.

ನೈತಿಕ ಪೊಲೀಸ್ ಗಿರಿ: ಮೂವರ ಬಂಧನ

ದಕ್ಷಿಣ ಕನ್ನಡ: ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದ ಹೊರವಲಯದಲ್ಲಿರುವ ಪಣಂಬೂರು ಬೀಚ್‌ನಲ್ಲಿ ವರದಿಯಾದ ನೈತಿಕ ಪೊಲೀಸ್‌ಗಿರಿ ಮತ್ತು ಕಿರುಕುಳ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪೊಲೀಸರು ಸೋಮವಾರ ಮೂವರನ್ನು ಬಂಧಿಸಿದ್ದಾರೆ. ಮೂಲಗಳ ಪ್ರಕಾರ ಮಂಗಳೂರು ನಗರದ ಹೊರವಲಯದ ಪಣಂಬೂರು ಬೀಚ್‌ನಲ್ಲಿ ಈ ಘಟನೆ ನಡೆದಿದ್ದು, ಕೇರಳ ಮೂಲದ ಪುರುಷ ಮತ್ತು ಬೆಂಗಳೂರು ಮೂಲದ ಮಹಿಳೆ ದಂಪತಿಗಳಾಗಿದ್ದು, ಪಣಂಬೂರು ಬೀಚ್ ನಲ್ಲಿ ತಿರುಗಾಡುತ್ತಿದ್ದಾಗ ಬಲಪಂಥೀಯ ಸಂಘಟನೆ ಕಾರ್ಯಕರ್ತರು ಅಡ್ಡಗಟ್ಟಿದ್ದಾರೆ. ಇಬ್ಬರೂ ಬೇರೆ ಬೇರೆ ಧರ್ಮಗಳಿಗೆ ಸೇರಿದವರಾಗಿದ್ದು ಏಕೆ ಒಟ್ಟಿಗೆ ಇದ್ದಾರೆ ಎಂದು ಪ್ರಶ್ನಿಸಿದರು. ಈ ವಿಚಾರ ತಿಳಿದ ಕೂಡಲೇ ಪಣಂಬೂರು ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಆರೋಪಿಗಳನ್ನು ವಶಕ್ಕೆ ಪಡೆದಿದ್ದರು. ನಂತರ, ಪ್ರಾಥಮಿಕ ವಿಚಾರಣೆಯ ನಂತರ, ಅವರನ್ನು ಬಂಧಿಸಲಾಗಿದೆ ಎನ್ನಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಇನ್ನಷ್ಟೇ ಹೊರಬರಬೇಕಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಫೆ.12ರಿಂದ 23ರವರೆಗೆ 'ರಾಜ್ಯ ಬಜೆಟ್' ಅಧಿವೇಶನ: ಸ್ಪೀಕರ್ ಯು.ಟಿ ಖಾದರ್

ಬೆಂಗಳೂರು: ವಿಧಾನಮಂಡಲದ ಅಧಿವೇಶನ ಇದೇ ಫೆ.12ರಂದು ಆರಂಭಗೊಳ್ಳಲಿದೆ. ಫೆ.12ರಂದು ರಾಜ್ಯಪಾಲರು ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2024–25ನೇ ಸಾಲಿನ ಆಯವ್ಯಯವನ್ನು ಮಂಡಿಸಲಿದ್ದಾರೆ ಎಂದು ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ಅವರು ತಿಳಿಸಿದರು.

ವಿಧಾನಸೌಧದದ ಸಮ್ಮೇಳನ ಸಭಾಂಗಣದಲ್ಲಿ ಸೋಮವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಅಧಿವೇಶನಕ್ಕೂ ಮುನ್ನ ಫೆ.9ರಂದು ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ಶಾಸಕರಿಗೆ ಹಾಗೂ ಮಾಧ್ಯಮ ಪ್ರತಿನಿಧಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ. ಶಾಸಕರಿಗೆ ಬಜೆಟ್ ಅಧಿವೇಶನದ ಸ್ವರೂಪ, ಚರ್ಚೆಗಳ ಬಗ್ಗೆ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುವುದು ಮತ್ತು ಬಜೆಟ್ ಅಧಿವೇಶನದ ವರದಿಗಾರಿಕೆ ಬಗ್ಗೆಯೂ ಮಾಧ್ಯಮ ಪ್ರತಿನಿಧಿಗಳಿಗೆ ವಿಶೇಷ ತರಬೇತಿ ನೀಡಲಾಗುವುದು ಎಂದು ಅವರು ವಿವರಿಸಿದ ಸ್ಪೀಕರ್ ಖಾದರ್ ಅವರು ಈ ತರಬೇತಿ ಕಾರ್ಯಾಗಾರಕ್ಕೆ ವಿಧಾನಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಚಾಲನೆ ನೀಡಲಿದ್ದಾರೆ ಎಂದರು.

ಫೆ.16ರಂದು ಸಿಎಂ ಸಿದ್ದರಾಮಯ್ಯ ಬಜೆಟ್ ಮಂಡನೆ: ಫೆ.16ರಂದು ಸಿಎಂ ಅವರು ಬಜೆಟ್ ಮಂಡಿಸಲಿದ್ದು, ಆಯವ್ಯಯದ ಮೇಲೆ ಸಾಮಾನ್ಯ ಚರ್ಚೆ ನಡೆಯಲಿದೆ ಎಂದು ಸ್ಪೀಕರ್ ಖಾದರ್ ಅವರು ವಿವರಿಸಿದರು.

12ರಂದು ರಾಜ್ಯಪಾಲರು ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಭಾಷಣ ಮಾಡಲಿದ್ದು, ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆ ನಡೆದು ತದನಂತರ ನಿರ್ಣಯ ಅಂಗೀಕಾರವಾಗಲಿದೆ. ರಾಜ್ಯಪಾಲರ ಭಾಷಣದ ನಂತರ 16ನೇ ವಿಧಾನಸಭೆಯ

02ನೇ ಅಧಿವೇಶನ ಮುಕ್ತಾಯವಾದ ನಂತರ ಇಲ್ಲಿಯವರೆಗೆ ನಿಧನ ಹೊಂದಿದ ಗಣ್ಯ ವ್ಯಕ್ತಿಗಳ ಕುರಿತು ಸಂತಾಪ ಸೂಚನಾ ನಿರ್ಣಯಗಳನ್ನು ಮಂಡಿಸಲಾಗುವುದು ಎಂದರು.

ಈ ಅಧಿವೇಶನದಲ್ಲಿ ಸರಕಾರದಿಂದ ಸ್ವೀಕರಿಸಲಾಗುವ ವಿಧೇಯಕಗಳನ್ನು ಪರ್ಯಾಲೋಚನೆಗೆ ಹಾಗೂ ಅಂಗೀಕಾರಕ್ಕೆ ತೆಗೆದುಕೊಳ್ಳಲಾಗುವುದು. 10 ದಿನಗಳ ಕಾಲ ನಡೆಯುವ ಈ ಅಧಿವೇಶನದಲ್ಲಿ 8 ದಿನಗಳ ಕಾಲ ಪ್ರಶ್ನೋತ್ತರ ಕಲಾಪಗಳನ್ನ ನಿಗದಿಪಡಿಸಲಾಗಿದೆ. ಇದರ ಜೊತೆಗೆ ಗಮನಸೆಳೆಯುವ ಸೂಚನೆಗಳು, ಶೂನ್ಯವೇಳೆ, ನಿಲುವಳಿ ಸೂಚನೆ, ನಿಯಮ 69ರ ಸೂಚನೆಗಳು, ಖಾಸಗಿ ಸದಸ್ಯರುಗಳ ಕಾರ್ಯಕಲಾಪಗಳನ್ನು ನಡೆಸಲಾಗುವುದು ಎಂದರು.

ಶಾಸಕರು,ಮಾಧ್ಯಮ ಪ್ರತಿನಿಧಿಗಳು ಹಾಗೂ ಇಲಾಖಾಧಿಕಾರಿಗಳಿಗಾಗಿ ವಿಧಾನಸಭೆಯ ಸಭಾಂಗಣದಲ್ಲಿದ್ದ ಕ್ಯಾಂಟೀನ್ ಸೌಲಭ್ಯವನ್ನು ಈ ಹಿಂದಿನಂತೆ ವಿಧಾನಸೌಧದ ಮೊದಲನೇ ಮಹಡಿಯ ಪೂರ್ವಭಾಗದಲ್ಲಿರುವ ಸೆಂಟ್ರಲ್ ಹಾಲ್‌ನಲ್ಲಿ ವ್ಯವಸ್ಥೆಗೊಳಿಸಲಾಗಿದೆ. ಸದನದಲ್ಲಿ ಉತ್ತರಿಸಲಾಗುವ ಪ್ರಶ್ನೆಗಳು,ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು,ಇತ್ಯಾದಿ ಸೂಚನೆಗಳನ್ನು ಸರಕಾರದವರು ನೀಡುವ ಲಿಖಿತ ಉತ್ತರಗಳನ್ನು ಸದನದಲ್ಲಿ ಮಂಡಿಸಿದ ತರುವಾಯ ಮಾನ್ಯ ಸಂಸದರಿಗೆ ಹಾಗೂ ಪತ್ರಕರ್ತರಿಗೆ ಇ–ಮೇಲ್ ಮುಖಾಂತರ ಕಳುಹಿಸುವ ವ್ಯವಸ್ಥೆ ಮಾಡಲಾಗುವುದು. ಪತ್ರಕರ್ತರಿಗೆ ವಾರ್ತಾ ಇಲಾಖೆಯ ಮುಖಾಂತರ ಇ–ಮೇಲ್ ಕಳುಹಿಸಲಾಗುವುದು.ಅಲ್ಲದೇ ಸಚಿವಾಲಯದ ವೆಬ್‌ಸೈಟಿನಲ್ಲಿಯೂ ದೊರೆಯುತ್ತದೆ ಎಂದರು.

ಶಾಸಕರಿಗೆ ವೈವಿಧ್ಯಮಯ ಭೋಜನ: ಅಧಿವೇಶನ ಆರಂಭವಾದಾಗಿನಿಂದ ಮುಕ್ತಾಯವಾಗುವವರೆಗೆ 10 ದಿನಗಳ ಕಾಲ ಬೆಳಗ್ಗೆ 8ರಿಂದ 9ರವರೆಗೆ ಸದನದ ಸದಸ್ಯರಿಗೆ ಲಘು ಉಪಹಾರ ಮತ್ತು ನಿತ್ಯ ಮಧ್ಯಾಹ್ನ ಬೆಂಗಳೂರಿನ ವಿವಿಧ ಹೋಟಲ್‌ಗಳ ವೈವಿಧ್ಯಮಯವಾದ ರುಚೀಕರ,ಆರೋಗ್ಯಪೂರ್ಣವಾದ ಭೋಜನದ ವ್ಯವಸ್ಥೆಯನ್ನ ಮಾಡಲಾಗುತ್ತಿದೆ ಎಂದು ಸ್ಪೀಕರ್ ಖಾದರ್ ಅವರು ವಿವರಿಸಿದರು. ಭದ್ರತೆಯನ್ನು ಇನ್ನಷ್ಟು ಉತ್ತಮಗೊಳಿಸಲು ವ್ಯವಸ್ಥೆ ಮಾಡಲಾಗುವುದು ಎಂದರು.

ಮಾಧ್ಯಮದವರು ಅತ್ಯುತ್ತಮ ವಿಷಯಗಳ ಕುರಿತು ಬೆಳಕು ಚೆಲ್ಲಿ ಸದನದ ಕಲಾಪಕ್ಕೆ ಮೆರಗು ನೀಡಬೇಕು ಎಂದು ಅವರು ಹೇಳಿದರು.

ವೇಶ್ಯಾವಾಟಿಕೆ ದಂಧೆ ಮೇಲೆ ದಾಳಿ: ಇಬ್ಬರು ನಿರ್ಮಾಪಕರು ಬಂಧನ

ಮುಂಬೈ: ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಬಾಯಂದರ್‌ನಲ್ಲಿ ನಡೆಯುತ್ತಿದ್ದ ಐಷಾರಾಮಿ ಸೆಕ್ಸ್ ರಾಕೆಟ್ ದಂಧೆಯನ್ನು ಪೊಲೀಸರು ಬೇಧಿಸಿದ್ದಾರೆ. ಜೊತೆಗೆ ಹೆಣ್ಮಕ್ಕಳನ್ನು ಮಾಂಸ ದಂಧೆಯ ಜಾಲಕ್ಕೆ ಬೀಳಿಸುತ್ತಿದ್ದ ಇಬ್ಬರು ನಿರ್ಮಾಪಕರನ್ನು ಪೊಲೀಸರು ಬಂಧಿಸಿದ್ದಾರೆ.

ಅಂದ್ಹಾಗೆ ಇದು ಸಣ್ಣ ಪುಟ್ಟ ಸೆಕ್ಸ್ ರಾಕೆಟ್ ದಂಧೆಯಲ್ಲ. ಟಿವಿ ನಟಿಯರು, ಬಾಲಿವುಡ್ ಸಿನಿಮಾ ನಟಿಯರು, ವೆಬ್ ಸರಣಿಯ ಕಲಾವಿದರು ವೇಶ್ಯಾವಾಟಿಕೆಯಲ್ಲಿ ತೊಡಗಿರೋದು ಬೆಳಕಿಗೆ ಬಂದಿದೆ. ಪೊಲೀಸ್ ಇನ್ಸ್ಪೆಕ್ಟರ್ ಸಮೀರಾ ಅಹಿರಾ ನೀಡಿರುವ ಮಾಹಿತಿ ಪ್ರಕಾರ, ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದ್ದರು. ಐಷಾರಾಮಿ ಹೋಟೆಲ್ನಲ್ಲಿ ವೇಶ್ಯಾವಾಟಿಕೆ ನಡೆಯುತ್ತಿರೋದು ಗೊತ್ತಾಗಿದೆ ಎಂದು ತಿಳಿಸಿದ್ದಾರೆ.

ಇಬ್ಬರು ಅರೆಸ್ಟ್..! ಪ್ರಕರಣ ಸಂಬಂಧ ಐಷಾರಾಮಿ ಹೋಟೆಲ್ನಲ್ಲಿ ಇಬ್ಬರು ನಿರ್ಮಾಪಕರು ಸಿಕ್ಕಿಬಿದ್ದಿದ್ದಾರೆ. ರತ್ನಮಯ್ಯ ನರಂಕತೇಲು ಹಾಗೂ ಚಂದ್ರಹಾಸ್ ಅಲಿಯಾಸ್ ಮೈಕೆಲ್ ಡೇವಿಡ್ ಎಂಬುವವರನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಮಾತ್ರವಲ್ಲ ಇವರ ವಿರುದ್ಧ ಐಪಿಸಿ ಸೆಕ್ಷನ್ 370 (2) (3) ಮತ್ತು ಅನೈತಿಕ ಕಳ್ಳಸಾಗಣೆ ಅಡಿಯಲ್ಲಿ ಕೇಸ್ ದಾಖಲಿಸಿಕೊಂಡಿದ್ದಾರೆ.

ಹೈ–ಪ್ರೊಫೈಲ್ ಕೇಸ್ ಆಗಿರೋ ಹಿನ್ನ

ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡುತ್ತೇನೆ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ : ನಾನು ಹಿಡಿದ ಛಲವನ್ನು ಎಂದೂ ಬಿಡುವುದಿಲ್ಲ. ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಪಣ ತೊಟ್ಟಿದ್ದೇನೆ. ಮುಂಬರುವ ದಿನಗಳಲ್ಲಿ ಗ್ರಾಮೀಣ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡುತ್ತೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಮಾಸ್ತಮರ್ಡಿ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಸೋಮವಾರ ಸಂಜೆ ಸುಸಜ್ಜಿತ ಸಮುದಾಯ ಭವನ ನಿರ್ಮಾಣದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಚುನಾವಣೆಯ ಪೂರ್ವದಲ್ಲಿ ಕೊಟ್ಟಂತಹ ಭವ್ಯ ಸಮುದಾಯ ಭವನ ನಿರ್ಮಾಣದ ಭರವಸೆ ಸಾಕಾರಗೊಂಡಿದೆ. ನಿಮ್ಮೆಲ್ಲರ ಆಶೀರ್ವಾದ, ಬಸವಣ್ಣನ ಹಾಗೂ, ಗ್ರಾಮದ ಸರ್ವ ದೇವಾನು ದೇವತೆಗಳ ಅನುಗ್ರಹದಿಂದ ಸಮುದಾಯ ಭವನ

ನಿರ್ಮಾಣದ ಪೂಜೆ ನೆರವೇರಿಸಿದ್ದೇನೆ ಎಂದು ಅವರು ಹೇಳಿದರು.

ನೀವೆಲ್ಲರೂ ಸೇರಿ ಅದ್ದೂರಿ ಮೆರವಣಿಗೆಯ ಮೂಲಕ ಬರಮಾಡಿಕೊಂಡಿದ್ದೀರಿ, ನಿಮ್ಮ ಪ್ರೀತಿಗೆ ಬೆಲೆ ಕಟ್ಟಲಾಗದು. ನಿಮ್ಮೆಲ್ಲರ ಪ್ರೀತಿಯನ್ನು ಕೊನೆಯ ಉಸಿರು ಇರುವವರೆಗೂ ಉಳಿಸಿಕೊಂಡು ಹೋಗುವಂತೆ ಕೆಲಸ ಮಾಡ್ತಿನಿ.

ಬಡವ– ಶ್ರೀಮಂತರೆನ್ನದೇ ಎಲ್ಲರನ್ನು ಜೊತೆಗೆ ಕರೆದುಕೊಂಡು ಕೆಲಸ ಮಾಡುತ್ತ ಬಂದಿದ್ದೇನೆ. ಶಾಸಕಿ ಮಾಡಿನೋಡಿ, ಕೆಲಸ ಮಾಡ್ತಿನಿ ಅಂತಾ ಹೇಳಿದ್ದೆ, ಮೊದಲ ಅವಧಿಯಲ್ಲಿ ವಿರೋಧ ಪಕ್ಷದಲ್ಲಿ ಇದ್ರೂ ಕೂಡ ಸುಮಾರು 18,00 ಕೋಟಿ ರೂ.ಗಳ ಕೆಲಸ ಮಾಡಿದ್ದೇನೆ ಎಂದು ಅವರು ಹೇಳಿದರು.

ನಮ್ಮ ಪಕ್ಷ ಅಧಿಕಾರಕ್ಕೆ ಬರುತ್ತದೆ, ನನ್ನ ಮೇಲೆ ವಿಶ್ವಾಸ ಇಡಿ, ನಿಮ್ಮೂರಿನ ಮಗಳು ಮಂತ್ರಿಯಾಗ್ತಾಳೆ, ಒಳ್ಳೆಯ ಕೆಲಸ ಮಾಡ್ತಾಳೆ ಎಂದು ಚುನಾವಣೆ ವೇಳೆ ಹೇಳಿದ್ದೆ, ಅದರಂತೆ ಎಲ್ಲರೂ ವಿಶ್ವಾಸವನ್ನಿಟ್ಟು ನನಗೆ ಆಶೀರ್ವಾದ ಮಾಡಿದ್ದೀರಿ. ಗೃಹಲಕ್ಷ್ಮೀ ಯೋಜನೆಯ ಮೂಲಕ ನಿಮ್ಮ ಮನೆಯ ಮಗಳಾಗಿ ಗೃಹಲಕ್ಷಿಯನ್ನು ನಿಮ್ಮ ಮನೆಗೆ ಕರೆತರುವ ಕೆಲಸವನ್ನು ಮಾಡುತ್ತಿದ್ದೇನೆ. ನೀವೆಲ್ಲ ಸೇರಿ ನನ್ನ ಮಂತ್ರಿ ಮಾಡಿದ್ದಿರಿ, ಬರುವ ದಿನಗಳಲ್ಲಿ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿಯನ್ನು ಮಾಡಲಿದ್ದೇನೆ. ಈಗಾಗಲೇ ನೂರಾರು ಗುಡಿ–ಗೋಪುರಗಳು ನಿರ್ಮಾಣಗೊಂಡಿವೆ. ಜೊತೆಗೆ ಕ್ಷೇತ್ರದಲ್ಲಿ ಇನ್ನೂ ಅನೇಕ ಮಂದಿರಗಳು ತಲೆ ಎತ್ತಲಿವೆ. ಹಿಡಿದಂತ ಛಲವನ್ನು ನಾನು ಯಾವತ್ತೂ ಬಿಟ್ಟಿಲ್ಲ, ಮೊನ್ನೆಯಷ್ಟೇ ಬಹುಕೋಟಿ ವೆಚ್ಚದಲ್ಲಿ ಕೆರೆಗಳ ಅಭಿವೃದ್ಧಿಗೆ ಅನುಮೊದನೆ ದೊರೆತ್ತಿದ್ದು, ರೈತರ, ಜಾನುವಾರುಗಳ ಹಿತ ದೃಷ್ಟಿಯಿಂದ ಕೆರೆಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಯಲ್ಲಪ್ಪ ತೋರ್ಲಿ, ಪ್ರಕಾಶ ಪಾಟೀಲ, ಚನ್ನಗೌಡ ಪಾಟೀಲ, ಚಂದ್ರು ಜಂಗಲಿ, ಬಾಳುಸ್ವಾಮಿ ಕುರಂಗಿ, ಮಂಜುನಾಥ ಕೋಲಕಾರ, ರಾಘವೇಂದ್ರ ಮಾವಿನಕಟ್ಟಿ, ಮಂಜುನಾಥ ಪಾರಿಶ್ವಾಡ್, ವಿಕ್ರಂ ಜಂಗಲಿ, ಬಸವರಾಜ ಕೋಲಕಾರ, ರುದ್ರಯ್ಯ ಹಂಚಿನ್, ಶ್ರೀಶೈಲ್ ಪಾಟೀಲ, ವಿಜಯ ಪಾಟೀಲ, ಸಂತೋಷ ಮಡ್ಡೆಪ್ಪಗೋಳ, ಎಸ್. ಬಿ. ಶಿವನಾಯ್ಕರ್, ಬಸವರಾಜ ತೋರ್ಲಿ, ಶಿವನಗೌಡ ಪಾಟೀಲ, ಈರಪ್ಪ ಮಾಥಾರಿ, ಮಹಾನಂದಾ ಬಸಲಿಂಗ ಮರಕಟ್ಟಿ ಉಪಸ್ಥಿತರಿದ್ದರು.

ಕೆಎಸ್‌ಆರ್‌ಟಿಸಿಯ 100 ಹೊಸ ಅಶ್ವಮೇಧ ಬಸ್ಸಗಳಿಗೆ ಚಾಲನೆ

ಬೆಂಗಳೂರು: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್‌ಆರ್ ಟಿಸಿ) ವತಿಯಿಂದ ವಿಧಾನಸೌಧದ ಮುಂಭಾಗದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ "100 ಹೊಸ ವಿನ್ಯಾಸದ ಕರ್ನಾಟಕ ಸಾರಿಗೆ ಬಸ್ಸು (ಅಶ್ವಮೇಧ – ಪಾಯಿಂಟ್ ಟು ಪಾಯಿಂಟ್ ಎಕ್ಸ್‌ಪ್ರೆಸ್) ಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.

ಬಣ್ಣ ಬಣ್ಣದ ಬಗೆ ಬಗೆಯ ಹೂವುಗಳಿಂದ ಸಿಂಗಾರಗೊಂಡಿರುವ ಅಶ್ವಮೇಧ – ಪಾಯಿಂಟ್ ಟು ಪಾಯಿಂಟ್ ಎಕ್ಸ್‌ಪ್ರೆಸ್ ಬಸ್ಸಗಳಿಗೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ವಿಧಾನಸೌಧದ ಮುಂಭಾಗ ಚಾಲನೆ ನೀಡಿದರು. ಈ ವೇಳೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಸಹ ಹಾಜರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪ್ರಸಕ್ತ ಹಣಕಾಸು ವರ್ಷದಲ್ಲಿ ರಾಜ್ಯ ಸಾರಿಗೆ ಘಟಕಗಳಿಗೆ 5,800 ಬಸ್‌ಗಳು ಸೇರ್ಪಡೆಯಾಗಲಿವೆ ಮತ್ತು ಕೆಎಸ್‌ಆರ್‌ಟಿಸಿ ಅನೇಕ ಪ್ರಯಾಣಿಕರ ಸ್ನೇಹಿ ಯೋಜನೆಗಳನ್ನು ತಂದಿದೆ ಎಂದರು.

ಈ ಅಶ್ವಮೇಧ ಬಸ್ಸುಗಳಲ್ಲೂ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ರಾಜ್ಯ ಸರ್ಕಾರ ಅವಕಾಶ ಕಲ್ಪಿಸಿದ್ದು, ಕೆಎಸ್‌ಆರ್‌ಟಿಸಿಗೆ ಒಟ್ಟು ಸಾವಿರ ಹೊಸ ಬಸ್ಸಗಳು ಬರಲಿವೆ. ಮೊದಲ ಹಂತದಲ್ಲಿ ನೂರು ಹೊಸ ಕ್ಲಾಸಿಕ್ ಬಸ್ಸಗಳಿಗೆ ಚಾಲನೆ ನೀಡಲಾಗಿದೆ.

ಈ ಬಸ್ಸಗಳಲ್ಲಿ ಮಹಿಳೆಯರ ಸುರಕ್ಷತೆಗಾಗಿ 12 ಪ್ಯಾನಿಕ್ ಬಟನ್, ಜಿಪಿಎಸ್, ಎರಡು ರೇರ್ ಕ್ಯಾಮರಾ, ಮೊಬೈಲ್ ಫೋನ್ ಚಾರ್ಜ್ ಹಾಕಿಕೊಳ್ಳಲು ಆರು ಚಾರ್ಜಿಂಗ್ ಪಾಯಿಂಟ್ ವ್ಯವಸ್ಥೆ ಮಾಡಲಾಗಿದೆ.

ಒಟ್ಟು 52 ಸೀಟಿನ ಬಸ್ಸಿನ ಒಳಗೆ ಮತ್ತು ಹೊರ ಭಾಗದಲ್ಲಿ ಎಲ್‌ಇಡಿ ಮಾರ್ಗಫಲಕ, ಪ್ರಯಾಣಿಕರು ಲಗೇಜ್ ಇಡಲು ದೊಡ್ಡದಾದ ಸ್ಥಳದ ವ್ಯವಸ್ಥೆ ಮಾಡಲಾಗಿದೆ.

KSRTC ಕಳೆದ ಡಿಸೆಂಬರ್ ಅಂತ್ಯದವರೆಗೆ 180 ಬಸ್‌ಗಳನ್ನು(153 ಡೀಸೆಲ್ ಮತ್ತು 27 ಎಲೆಕ್ಟ್ರಿಕ್) ಹೊಸದಾಗಿ ಪರಿಚಯಿಸಿದ್ದು, ಪ್ರಸಕ್ತ ಹಣಕಾಸು ವರ್ಷದಲ್ಲಿ 948 ಹೊಸ ಡೀಸೆಲ್ ಮತ್ತು 300 ಎಲೆಕ್ಟ್ರಿಕ್ ಬಸ್‌ಗಳನ್ನು ಪರಿಚಯಿಸಲು ಯೋಜಿಸಿದೆ.

ಜಿಲ್ಲಾ ಮಟ್ಟದ ಅತ್ಯುತ್ತಮ ಗೋಪಾಲಕರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬಳ್ಳಾರಿ: ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ 2023–24 ನೇ ಸಾಲಿನಲ್ಲಿ ವಿಸ್ತರಣಾ ಘಟಕ ಬಲಪಡಿಸುವಿಕೆ ಯೋಜನೆಯಡಿ ಜಿಲ್ಲಾ ಮಟ್ಟದ ಅತ್ಯುತ್ತಮ ಗೋಪಾಲಕರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಬಯಸುವ ಗೋಪಾಲಕರು ಆಧುನಿಕ ಪಶುಪಾಲನಾ ಪದ್ದತಿಗಳನ್ನು ಅಳವಡಿಸಿಕೊಂಡಿರಬೇಕು. ಗೋಉತ್ಪನ್ನಗಳ ತಯಾರಿಕೆ ಚಟುವಟಿಕೆಗಳನ್ನು ಕೈಗೊಂಡಿರಬೇಕು.

ಅತ್ಯುತ್ತಮ ಗೋಪಾಲಕರಿಗೆ ಬಹುಮಾನ ಮತ್ತು ಪಾರಿತೋಷಕ ಪ್ರಶಸ್ತಿ ಒಳಗೊಂಡಿರುತ್ತದೆ.

ಅರ್ಜಿಗಳನ್ನು ಆಯಾ ತಾಲ್ಲೂಕು ಮಟ್ಟದ ಪಶು ಆಸ್ಪತ್ರೆಯಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಫೆ.12 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ 5 ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಬಳ್ಳಾರಿ–9448233756, ಸಿರುಗುಪ್ಪ–7892855573, ಸಂಡೂರು–9108334846, ಕುರುಗೋಡು–9916503138 ಹಾಗೂ ಕಂಪ್ಲಿ–9964444527 ಗೆ ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯುಷ್ಮಾನ್ ಭವಃ ಮೇಳಗಳಲ್ಲಿ ತಾಯಿಕಾರ್ಡ್ ಮಹತ್ವ ಜಾಗೃತಿ

ಬಳ್ಳಾರಿ: ಪ್ರತಿ ಮಂಗಳವಾರ ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಡೆಯುವ ಆಯುಷ್ಮಾನ್ ಭವಃ ಮೇಳಗಳಲ್ಲಿ ತಾಯಿಕಾರ್ಡ್‌ಗಳ ಬಗ್ಗೆ ಮಹತ್ವ ತಿಳಿಸಿಕೊಡಲಾಗುತ್ತಿದ್ದು, ಗರ್ಭಿಣಿ ಮಹಿಳೆಯರು ಇದರ ಬಗ್ಗೆ ಅರಿವು ಹೊಂದಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಗರ್ಭಿಣಿ ಎಂದು ತಿಳಿದ ಕೂಡಲೇ, 12 ವಾರದೊಳಗೆ ನೋಂದಣಿ ಮಾಡಿಸಿಕೊಳ್ಳಬೇಕು. ಸಂಬಂಧಿತ ಗರ್ಭಿಣಿಗೆ ತಾಯಿಕಾರ್ಡ್ ಒದಗಿಸುವ ಜೊತೆಗೆ ಕಾರ್ಡ್ನಲ್ಲಿ ನಮೂದಾಗಿರುವ ಮಾಹಿತಿಯನ್ನು ಎಲ್ಲರಿಗೂ ತಿಳಿಸುವ ಕಾರ್ಯವನ್ನು ಆಯುಷ್ಮಾನ್ ಭವಃ ಮೇಳದಲ್ಲಿ ಮಾಡಲಾಗುತ್ತಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯುಷ್ಮಾನ್ ಭವಃ ಮೇಳಗಳಲ್ಲಿ ಸಮುದಾಯ ಆರೋಗ್ಯಾಧಿಕಾರಿಗಳು, ವೈದ್ಯರು, ತಜ್ಞ ವೈದ್ಯರ ಮೂಲಕ ಆರೋಗ್ಯ ತಪಾಸಣೆ ಕೈಗೊಳ್ಳಲಾಗುತ್ತಿದ್ದು, ಗರ್ಭಿಣಿಯೆಂದು ತಿಳಿದ ಕೂಡಲೇ ಗರ್ಭಿಣಿಯರಿಗೆ ಸಕಾಲದಲ್ಲಿ ತಾಯಿ ಕಾರ್ಡ್ ಒದಗಿಸಲಾಗುತ್ತಿದೆ. ಅವರ ಆಧಾರ್‌ಕಾರ್ಡ್ ಮತ್ತು ಬ್ಯಾಂಕ್ ಮಾಹಿತಿಯನ್ನು ಕ್ರೂಢೀಕರಿಸಿ ಹೆರಿಗೆ ಪೂರ್ವದಲ್ಲಿ ಸಿಗುವ ಎಲ್ಲಾ ಚುಚ್ಚುಮದ್ದುಗಳನ್ನು ಸಕಾಲದಲ್ಲಿ ನೀಡಲು ಸಹಕಾರಿಯಾಗುತ್ತದೆ ಎಂದು ತಿಳಿಸಿದ್ದಾರೆ.

ಗರ್ಭಿಣಿ ಸಮಯದಲ್ಲಿ ಕನಿಷ್ಠ 180 ಕಬ್ಬಿಣಾಂಶ ಮಾತ್ರೆಗಳನ್ನು ಕೊಡಿಸುವ ಮೂಲಕ ರಕ್ತಹೀನತೆಯನ್ನು ನಿಯಂತ್ರಿಸಿ ಸಹಜ ಹೆರಿಗೆಗೆ ಅಗತ್ಯ ಇರುವ ಸಿದ್ಧತೆಯನ್ನು ಕೈಗೊಳ್ಳಲಾಗುತ್ತಿದೆ. ಅಲ್ಲದೆ ಜನನದ ನಂತರ ಮಗುವಿಗೆ 12 ಮಾರಕ ರೋಗಗಳ ವಿರುದ್ಧ ನೀಡುವ ಲಸಿಕೆಗಳನ್ನು ವಯಸ್ಸಿಗನುಸಾರ ಸಂಪೂರ್ಣವಾಗಿ ಪಡೆಯುವ ಕುರಿತು ಮಾಹಿತಿ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

ಜೀವನ ಶೈಲಿ ಕಾಯಿಲೆಗಳ ನಿರ್ವಹಣೆ: ಜೀವನ ಶೈಲಿಯ ರೋಗಗಳಾದ ರಕ್ತದೊತ್ತಡ, ಸಕ್ಕರೆ ಕಾಯಿಲೆಯನ್ನು ಪರೀಕ್ಷೆ ಕೈಗೊಳ್ಳಲಾಗುತ್ತದೆ. ಎರಡು ವಾರಕ್ಕಿಂತ ಹೆಚ್ಚು ದಿನಗಳ ಕೆಮ್ಮು ಇದ್ದಲ್ಲಿ ಕ್ಷಯರೋಗ ಪರೀಕ್ಷೆ ಹಾಗೂ ರೋಗ ಲಕ್ಷಣಗಳು ಉಳ್ಳವರ ಕಫ ಪರೀಕ್ಷೆಯನ್ನು ಕೈಗೊಳ್ಳಲಾಗುತ್ತದೆ.

ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಕಾರ್ಡ್ ಸೃಜನೆ:

ಬಿಪಿಎಲ್ ಕುಟುಂಬಗಳಿಗೆ 05 ಲಕ್ಷದವರೆಗೆ ಉಚಿತ ಚಿಕಿತ್ಸಾ ವೆಚ್ಚ ಭರಿಸಲು ಅನುಕೂಲವಾಗುವ ಆಯುಷ್ಮಾನ್ ಭವ– ಪ್ರಧಾನ ಮಂತ್ರಿ ಜನಾರೋಗ್ಯ ಯೋಜನೆ– ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆ ಕಾರ್ಡುಗಳನ್ನು ಡಿಜಿಟಲ್ ಹೆಲ್ತ್ ಅಕೌಂಟ್ ಸಂಖ್ಯೆಯೊಂದಿಗೆ ಕಾರ್ಡ್ಗಳನ್ನು ಮೊಬೈಲ್ಗಳ ಮೂಲಕ ಸೃಜಿಸಲಾಗುವುದು.

ಅಂಗಾಂಗ ದಾನ ನೋಂದಣಿ:

ಜಿಲ್ಲೆಯಲ್ಲಿ ಈಗಾಗಲೇ 4010 ಅಂಗಾಂಗ ದಾನ ನೋಂದಣಿಯನ್ನು ಮಾಡಿ ರಾಷ್ಟ್ರ ಮಟ್ಟದಲ್ಲಿ ಮುಂಚುಣಿಯಲ್ಲಿದ್ದು, ನೋಂದಣಿಯನ್ನು ಸಹ ಮಾಡಲಾಗುವುದು. ಶಿಬಿರದಲ್ಲಿ ಡೆಂಗ್ಯು ಮತ್ತು ಚಿಕುನ್ಗುನ್ಯ ಕುಟುಂಬ ಕಲ್ಯಾಣ ವಿಧಾನಗಳು, ತಾಯಿ ಮಗುವಿನ ಆರೈಕೆ, ಮಾನಸಿಕ ಆರೋಗ್ಯ ಸಲಹೆಗಾಗಿ ಟೆಲಿ ಮನಸ್ ಮಾನಸಿಕ ಆರೋಗ್ಯ ಸಹಾಯವಾಣಿ14416 ಕುರಿತು ಸಹ ಮಾಹಿತಿ ನೀಡಲಾಗುತ್ತಿದೆ ಮತ್ತು ಇತರ ಸಾಮಾನ್ಯ ಆರೋಗ್ಯ ಸೇವೆಗಳನ್ನು ಸಹ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಹೆಚ್ಚಿನ ಅಗತ್ಯ ಚಿಕಿತ್ಸೆ ಇರುವಂತಹ ರೋಗಿಗಳಿಗೆ ಜಿಲ್ಲಾ ಆಸ್ಪತ್ರೆ ಮತ್ತು ವಿಮ್ಸ್ಗೆ ಕಳಿಸಿಕೊಡಲಾಗುವುದು. ಸಾರ್ವಜನಿಕರು ತಮ್ಮ ಆಧಾರ್ ಕಾರ್ಡ, ಮೊಬೈಲ್ ಹಾಗೂ ಈ ಹಿಂದೆ ಆಸ್ಪತ್ರೆಗೆ ಭೇಟಿ ನೀಡಿ ತೋರಿಸಿದ ಚೀಟಿಗಳನ್ನು ತಂದು ಶಿಬಿರದಲ್ಲಿ ಪಾಲ್ಗೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಶಿಕ್ಷಕರ ಕ್ಷೇತ್ರದ ಅಭಿವೃದ್ಧಿ, ಮಾದರಿ ಶಾಲೆಗೆ ಸರ್ಕಾರ ಪಣ: ಸಚಿವ ಸತೀಶ ಜಾರಕಿಹೊಳಿ

ಬೆಳಗಾವಿ: " ಶಿಕ್ಷಕರ ಕ್ಷೇತ್ರದ ಅಭಿವೃದ್ಧಿಗೆ ಸಿಎಂ ಸಿದ್ಧರಾಮಯ್ಯನವರ ಸರ್ಕಾರ ಸ್ಪಂದಿಸಲಿದೆ. ಈ ನಿಟ್ಟಿನಲ್ಲಿ ಸರ್ಕಾರ ಶಾಲೆಗಳು ರಾಜ್ಯದಲ್ಲಿ ಮಾದರಿ ಶಾಲೆಗಳು ನಿರ್ಮಾಣವಾಗಬೇಕೆಂಬ ಉದ್ದೇಶದಿಂದ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಲಿದೆ" ಎಂದು ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

ಇಲ್ಲಿನ ಮಹಾವೀರ ಭವನದಲ್ಲಿ ಭಾನುವಾರ ಕರ್ನಾಟಕ ರಾಜ್ಯ ಪದವೀಧರ ಪ್ರಾಥಮಿಕ ಶಿಕ್ಷಕರ ಸಂಘ (ರಿ) ವತಿಯಿಂದ ಆಯೋಜಿಸಲಾದ ರಾಜ್ಯ ಮಟ್ಟದ ಶೈಕ್ಷಣಿಕ ಕಾರ್ಯಗಾರ ಹಾಗೂ ಮಹಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು,

ಸಮಾಜಕ್ಕೆ ಶಿಕ್ಷಕರ ಕೊಡುಗೆ ಅಪಾರವಾಗಿದೆ. ಹೀಗಾಗಿ ಶಿಕ್ಷಕರ ಸಮಸ್ಯೆಗಳನ್ನು ಬಗೆ ಹರಿಸಲು ಸರ್ಕಾರ ಮಟ್ಟದಲ್ಲಿ ಕೆಲಸಗಳು ನಡೆಯಲಿವೆ. ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಸಾಧ್ಯವಾದಷ್ಟು ಲೋಕೊಪಯೋಗಿ ಇಲಾಖೆಯಿಂದ ಪ್ರಯತ್ನ

ಮಾಡಲಾಗುತ್ತಿದೆ. ಕನ್ನಡ ಸರ್ಕಾರ ಶಾಲೆಗಳು ಮಾದರಿ ಮಾಡೋಣ ಅದಕ್ಕೆ ಶಿಕ್ಷಕರ ಸಹಕಾರ ಅಗತ್ಯವಾಗಿದೆ ಎಂದರು. ಎಂಎಲ್‌ಸಿ ಪ್ರಕಾಶ ಹುಕ್ಕೇರಿ ಅವರು ಮಾತನಾಡಿ, ಶಿಕ್ಷಕರ ಸೇವೆ ಮಾಡಬೇಕೆಂಬ ಮನೋಭಾವನೆ ಈ ಕ್ಷೇತ್ರಕ್ಕೆ ಬಂದಿದ್ದೆ. ಶಿಕ್ಷಕರು ನನ್ನ ಕೈ ಹಿಡಿದು ಬಹುಮತದಿಂದ ಆಯ್ಕೆ ಮಾಡಿದ್ದಿರಿ, ನಮ್ಮ ಅಧಿಕಾರ ಅವಧಿವರೆಗೂ ಈ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಆದಷ್ಟು ಬೇಗ ಶಿಕ್ಷಕರ ಸಮಸ್ಯೆ ಇತ್ಯರ್ಥ ಮಾಡಲಾವುದು, ಹೀಗಾಗಿ ಸಿಎಂ, ಡಿಸಿಎಂ ಅವರ ಒಂದು ಸುತ್ತಿನ ಚರ್ಚೆ ಮಾಡಲಾಗಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲಾ ಕಟ್ಟಡ ನಿರ್ಮಾಣ 12 ಕೋಟಿ ರೂ. ನೀಡಲಾಗುವುದು. ಒಂದು ಕೋಟಿ ರೂ. ವೆಚ್ಚದಲ್ಲಿ ಚಿಕ್ಕೋಡಿಯಲ್ಲಿ ಗುರುಭವನ ನಿರ್ಮಾಣ ಮಾಡಲಾಗುವುದು. ಅದರಂತೆ

ರಾಜ್ಯದ ಪ್ರತಿಯೊಂದು ಜಿಲ್ಲೆಗೆ ಗುರು ಭವನ ನಿರ್ಮಾಣ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಎಸ್ ಡಿ. ಗಾಡಿ , ಉಮಾದೇವಿ ಹಿರೇಮಠ ಹಾಗೂ ಇತರರು ಇದ್ದರು.

ಗ್ರಾಮ ಒನ್ ಕೇಂದ್ರಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಅರ್ಜಿ ಆಹ್ವಾನ

ಶಿವಮೊಗ: ಶಿವಮೊಗ್ಗ ಜಿಲ್ಲೆಯಲ್ಲಿ ಗ್ರಾಮ ಒನ್ ಕೇಂದ್ರಗಳಿಲ್ಲಿ ಖಾಲಿ ಇರುವ ಹುದ್ದೆಗಳಿಗೆ ಸೇವೆ ನೀಡಲು ಆಸಕ್ತಿ ಇರುವ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಮ ಒನ್ ಯೋಜನೆ ಸರ್ಕಾರದ ಮಹತ್ವಕಾಂಕ್ಷಿಯ ಯೋಜನೆಯಾಗಿದ್ದು ಗ್ರಾಮೀಣ ಜನತೆಗೆ ವಿವಿಧ ಸೇವೆಗಳನ್ನು ಒದಗಿಸಲು ಏಕಗವಾಕ್ಷಿ ವ್ಯವಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಸರ್ಕಾರಿ ಸೇವೆಗಳನ್ನು ಪಡೆಯಲು ಗ್ರಾಮೀಣ ಭಾಗದ ಜನರ ಅಲೆದಾಟ ತಪ್ಪಿಸುವ ನಿಟ್ಟಿನಲ್ಲಿ ಗ್ರಾಮ ಮಟ್ಟದಲ್ಲಿ ಆರಂಭಗೊಂಡ ಗ್ರಾಮ ಒನ್ ಯೋಜನೆಯು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ತಮವಾಗಿ ಸ್ಪಂದನೆ ವ್ಯಕ್ತವಾಗುತ್ತಿದೆ.

ಈ ಯೋಜನೆಗೆ ಸಂಬಂಧಿಸಿದಂತೆ ಶಿವಮೊಗ್ಗ ಜಿಲ್ಲೆಯಲ್ಲಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಕೊಮ್ಮನಹಳ್ಳಿ –1, ಹೊಸನಗರ ತಾಲೂಕಿನ

ಸಿರುಗುಪ್ಪ ತಾಲ್ಲೂಕಿನಲ್ಲಿ ವಿವಿಧೆಡೆ ಸಂವಿಧಾನ ಜಾಗೃತಿ ಜಾಥಾ ಸಂಚಾರ

ಬಳ್ಳಾರಿ: ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಅಂಗವಾಗಿ ಜಾಥಾವು ಭಾನುವಾರದಂದು ಸಿರುಗುಪ್ಪ ತಾಲ್ಲೂಕಿನ ಬಗ್ಗೂರು, ಕುರುವಳ್ಳಿ, ಬಿ.ಎಂ.ಸೂಗೂರು ಹಾಗೂ ರಾವಿಹಾಳು ಗ್ರಾಮ ಪಂಚಾಯಿತಿಗಳ ಮಾರ್ಗವಾಗಿ ಸಂಚರಿಸಿತು. ಅಗಸನೂರು ಹಾಗೂ ನಾಡಂಗ ಗ್ರಾಮಗಳಲ್ಲಿ ಗ್ರಾಮಸ್ಥರು ಜಾಥಾವನ್ನು ಸ್ವಯಂ ಪ್ರೇರಿತರಾಗಿ ಅತ್ಯಂತ ಅದ್ದೂರಿಯಾಗಿ ಮೆರವಣಿಗೆಯ ಮೂಲಕ ಬರಮಾಡಿಕೊಂಡಿದ್ದು ವಿಶೇಷವಾಗಿತ್ತು.

ಜಾಥಾವನ್ನು ಪ್ರತೀ ಗ್ರಾಮ ಪಂಚಾಯಿತಿಗಳಲ್ಲಿ ಕಳಶ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ಡೊಳ್ಳು ಕಲಾವಿದರು, ತಾಷೆ ರಾಂಡೋಲ್ ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಗ್ರಾಮದ ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಿದರು.

ಬಗ್ಗೂರು ಗ್ರಾಮದಲ್ಲಿ ತಾಲ್ಲೂಕು ಡಾ.ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷ ಕೊಡ್ಲೆ ಮಲ್ಲಿಕಾರ್ಜುನ ಮಾತನಾಡಿ, ಭಾರತದ ಸಂವಿಧಾನದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಬರೆದಂತೆ ಎಲ್ಲಾ ಜಾತಿ ಧರ್ಮಗಳು, ತಮ್ಮ ಜಾತಿಗಳನ್ನು ಬಿಟ್ಟು, ತಾವೆಲ್ಲರೂ ಒಗ್ಗಟ್ಟಾಗಿ ಶಿಕ್ಷಣ, ಉದ್ಯೋಗ ಸಮಾನರು ಮತ್ತು ಸಾರ್ವಜನಿಕರಲ್ಲಿ ಎಲ್ಲರೂ ಅಣ್ಣ ತಮ್ಮಂದಿರಾಗಿ ಬದುಕಬೇಕೆಂಬುದೇ ವಿದ್ಯಾರ್ಥಿಗಳು ಈಗ ಓದಿದ ಸಂವಿಧಾನದ ಪ್ರಸ್ತಾವನೆಯ ಮೊದಲನೆಯ ಪುಟವಾಗಿದೆ ಎಂದು ಹೇಳಿದರು.

ನಾವೆಲ್ಲರೂ ಭಾರತೀಯರು, ನಮ್ಮ ಹಕ್ಕುಗಳನ್ನು ಪ್ರತಿಯೊಬ್ಬರೂ ಪಡೆದುಕೊಂಡು, ನಮ್ಮ ಹಕ್ಕುಗಳ ಮೂಲಕ ನಮ್ಮ ಮನೆ, ನಮ್ಮ ಊರು, ನಮ್ಮ ಜಿಲ್ಲೆ, ನಮ್ಮ ರಾಜ್ಯ ಹಾಗೂ ನಮ್ಮ ದೇಶವನ್ನು ಕಾಪಾಡಬೇಕೆಂಬ ಉದ್ದೇಶದಿಂದ ಈ ಜಾಥಾ ಕಾರ್ಯಕ್ರಮ ರಾಜ್ಯಾದಾದ್ಯಂತ ಸಂಚರಿಸುತ್ತಿದೆ ಎಂದು ತಿಳಿಸಿದರು.

ರಾರಾವಿ ಗ್ರಾಮದ ಶ್ರೀ ಚೈತನ್ಯ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯ ಗುರುಗಳಾದ ಎರ್ರೆಪ್ಪ ಅವರು ಮಾತನಾಡಿ, ಸಂವಿಧಾನವನ್ನು ಪ್ರತಿಯೊಬ್ಬರೂ ಓದಲೇಬೇಕು.

ಭಾರತೀಯರಿಗೆ ಸಂವಿಧಾನವು ಪವಿತ್ರವಾದ ಗ್ರಂಥವಾಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಎಲ್ಲಾ ಜನಾಂಗದವರಿಗೆ, ಬುಡಕಟ್ಟು ಜನಾಂಗದವರಿಗೆ ಸಮಾನವಾಗಿರುವ ಹಕ್ಕನ್ನು ನೀಡುವ ಸಲುವಾಗಿ ಸಂವಿಧಾನವನ್ನು ಬರೆದರು ಎಂದು ತಿಳಿಸಿದರು.

ಬಳಿಕ ಸಂಜೆ ರಾವಿಹಾಳು ಗ್ರಾಪಂ ಆವರಣದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ರಾವಿಹಾಳು ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕ ಚಂದ್ರಪ್ಪ ಅವರು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಅವರು ದಮನಿತರ, ಹಿಂದುಳಿದವರ ಹಾಗೂ ಮಹಿಳೆಯರ ಅಭಿವೃದ್ಧಿಗಾಗಿ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳು, ವಿಧಿಗಳ ಮೂಲಕ ಸಂವಿಧಾನಾತ್ಮಕ ಅವಕಾಶಗಳನ್ನು ಕಲ್ಪಿಸಿ ಅಜರಾಮರರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಭಾರತದ ಸಂವಿಧಾನದ ಪ್ರಸ್ತಾವನೆಯಲ್ಲಿ ಅಳವಡಿಸಿರುವ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ, ಸಮಾನತೆ, ಅಭಿವ್ಯಕ್ತಿ, ಭ್ರಾತೃ ಭಾವನೆ ಮೊದಲಾದ ಪರಿಕಲ್ಪನೆ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ ಚರಿತ್ರೆಯನ್ನು ಮನಮುಟ್ಟುವಂತೆ ವಿವರಿಸಿದರು.

ರಾವಿಹಾಳು ಗ್ರಾಪಂ ಅಧ್ಯಕ್ಷ ಜಯರಾಂ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಾಪಂ ಉಪಾಧ್ಯಕ್ಷರಾದ ಈರಮ್ಮ ಮಲ್ಲಯ್ಯ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಬಸವರಾಜ, ಗ್ರಾಮ ಪಂಚಾಯಿತಿ ಸದಸ್ಯ ಟಿ.ಮಾದಣ್ಣ, ರಾಚಯ್ಯ ಸ್ವಾಮಿ, ಪ್ರೌಢಶಾಲಾ ಮುಖ್ಯ ಗುರುಗಳಾದ ಅಪರ್ಣಾ, ಸಮೂಹ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ರಾಮಚಂದ್ರಪ್ಪ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜೇಶ್ವರಿ, ನಿಯಪಾಲಕರಾದ ಬಾಳಪ್ಪ ಕವಲೂರ, ಮೌನೇಶ್ವರ, ಚಂದ್ರಶೇಖರ, ಶಶಿಧರ ಸ್ವಾಮಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿಲಯಪಾಲಕರಾದ ಶಶಿಧರ ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಾಯಿತು. ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು ಮತ್ತು ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಅವಳಿ ಮಕ್ಕಳು–ಬಾಣಂತಿ ಸಾವು: ಆಸ್ಪತ್ರೆ ವಿರುದ್ಧ ಕುಟುಂಬಸ್ಥರ ಆಕ್ರೋಶ

ಗದಗ: ಗದಗ ಜಿಲ್ಲೆಯ ಗಜೇಂದ್ರಘಡದಲ್ಲಿ ನವಜಾತ ಅವಳಿ ಮಕ್ಕಳು ಸಾವನ್ನಪ್ಪಿದ್ದು, ಇದೇ ವೇಳೆ ತೀವ್ರ ರಕ್ತಸ್ರಾವದಿಂದಾಗಿ ಬಾಣಂತಿ ತಾಯಿ ಕೂಡ ಕೊನೆಯುಸಿರೆಳೆದಿರುವ ದಾರುಣ ಘಟನೆ ನಡೆದಿದೆ.

ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ವಿರುಪಾಪುರ ಗ್ರಾಮದ ತುಂಬು ಗರ್ಭಿಣಿಗೆ ತೀವ್ರ ಹೆರಿಗೆ ನೋವು ಕಾಣಿಸಿಕೊಂಡಿತ್ತು. ಗದಗ ಜಿಲ್ಲೆಯ ಗಜೇಂದ್ರಗಢ ತಾಲೂಕಿನ ಕಾರೋಡಗಿಮಠ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ತುಂಬುಗರ್ಭಿಣಿ ನಂದಿನಿ ಫೆ.2ರಂದು ಅವಳಿ ಮಕ್ಕಳಿಗೆ ಜನ್ಮ ನೀಡಿದ್ದಾರೆ. ಆದರೆ ಹೆರಿಗೆ ಬಳಿಕ ಇಬ್ಬರು ಮಕ್ಕಳು ಮೃತಪಟ್ಟಿವೆ.

ಇನ್ನು ಬಾಣಂತಿ ನಂದಿನಿ ತೀವ್ರ ರಕ್ತಸ್ರಾವದಿಂದ ಅಸ್ವಸ್ಥಗೊಂಡಿದ್ದ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಬಾದಾಮಿ ಖಾಸಗಿ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ವೈದ್ಯರು ಶಿಫ್ಟ್ ಮಾಡಿದ್ದಾರೆ. ಆದರೆ ಬಾಣಂತಿ ಕೂಡ ಚಿಕಿತ್ಸೆ ಫಲಿಸದೇ ಇಂದು ಸಾವನ್ನಪ್ಪಿದ್ದಾರೆ.

ವೈದ್ಯರ ನಿರ್ಲಕ್ಷ್ಯವೇ ಸಾವಿಗೆ ಕರಣ ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದು, ಗಜೇಂದ್ರಗಢ ಖಾಸಗಿ ಆಸ್ಪತ್ರೆ ವೈದ್ಯರ ವಿರುದ್ಧ ಪ್ರತಿಭಟನೆ ನಡೆಸಿದ್ದಾರೆ.

ಕುಟುಂಬದವರ ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಗಜೇಂದ್ರಗಢ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ತನಿಖೆ ಬಳಿಕವೇ ಅವಳಿ ಮಕ್ಕಳ ಹಾಗೂ ಬಾಣಂತಿ ಸಾವಿನ ಸತ್ಯ ಬಯಲಾಗಲಿದೆ.

ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಐಪಿಒ

ಹುಬ್ಬಳ್ಳಿ: ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ತನ್ನ ಈಕ್ವಿಟಿ ಷೇರುಗಳ ಮುಖಬೆಲೆಯ ಆರಂಭಿಕ ಸಾರ್ವಜನಿಕ ಕೊಡುಗೆಗಾಗಿ ಬುಧವಾರ, ಫೆಬ್ರವರಿ 7,2024 ರಂದು ಬಿಡ್ ಗಳನ್ನು ತೆರೆಯುತ್ತದೆ.

ಬಿಡ್ಡಿಂಗ್ ದಿನಾಂಕ ಫೆಬ್ರವರಿ 7,2024 ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಶುಕ್ರವಾರ, ಫೆಬ್ರವರಿ 9,2024 ರಂದು ಮುಕ್ತಾಯಗೊಳ್ಳುತ್ತದೆ.

ಈ ಕೊಡುಗೆಯ ದರ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ 393 ರಿಂದ ರೂ 414 ಕ್ಕೆ ನಿಗದಿಪಡಿಸಲಾಗಿದೆ. ಕನಿಷ್ಠ 36 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 36 ಈಕ್ವಿಟಿ ಷೇರುಗಳ ಗುಣಾಕಾರಗಳಲ್ಲಿ ಬಿಡ್ ಗಳನ್ನು ಮಾಡಬಹುದು.

ಈಕ್ವಿಟಿ ಷೇರುಗಳ ಹೊಸ ವಿತರಣೆಯನ್ನು ಒಳಗೊಂಡ ಆರಂಭಿಕ ಸಾರ್ವಜನಿಕ ಕೊಡುಗೆ ಮೂಲಕ ರೂ 4,620.00 ಮಿಲಿಯನ್ ಹಣ ಸಂಗ್ರಹಿಸಲು ಬ್ಯಾಂಕ್ ಯೋಜಿಸಿದೆ, ಇದು ಪ್ರಿ–ಐಪಿಒ ಪ್ಲೇಸ್ಮೆಂಟ್ ಮತ್ತು ಮಾರಾಟದ ಕೊಡುಗೆಗಾಗಿ ಹೊಂದಾಣಿಕೆ ಮಾಡಿದ ನಂತರ ಮಾರಾಟ ಮಾಡುವ ಷೇರುದಾರರಿಂದ 2,608,629 ಈಕ್ವಿಟಿ ಷೇರುಗಳನ್ನು ಒಟ್ಟುಗೂಡಿಸುತ್ತದೆ. ಈ ಪ್ರಸ್ತಾಪವು ಅರ್ಹ ಉದ್ಯೋಗಿಗಳ ಚಂದಾದಾರಿಕೆಗಾಗಿ ರೂ 135.00 ದಶಲಕ್ಷದವರೆಗೆ ಮೀಸಲಾತಿಯನ್ನು ಒಳಗೊಂಡಿದೆ.

ಬ್ಯಾಂಕಿನ ಭವಿಷ್ಯದ ಬಂಡವಾಳದ ಅವಶ್ಯಕತೆಗಳನ್ನು ಪೂರೈಸಲು, ಅದರ ಶ್ರೇಣಿ–1 ಬಂಡವಾಳ ಮತ್ತು ಸಿಆರ್ಎಆರ್ ಅನ್ನು ಸುಧಾರಿಸಲು ಬ್ಯಾಂಕಿನ ಶ್ರೇಣಿ–1 ಬಂಡವಾಳದ ಮೂಲ ಹೆಚ್ಚಿಸಲು ಹೊಸ ಸಂಚಿಕೆಗಳಿಂದ ಬರುವ ನಿವ್ವಳ ಆದಾಯವನ್ನು ಬಳಸಿಕೊಳ್ಳಲು ಬ್ಯಾಂಕ್ ಪ್ರಸ್ತಾಪಿಸಿದೆ. ಇದಲ್ಲದೆ, ಹೊಸ ವಿತರಣೆಯಿಂದ ಬರುವ ಆದಾಯವನ್ನು ಪ್ರಸ್ತಾಪಕ್ಕೆ ಸಂಬಂಧಿಸಿದ ವೆಚ್ಚಗಳನ್ನು ಪೂರೈಸಲು ಸಹ ಬಳಸಲಾಗುತ್ತದೆ.

ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ಷೇರು ವಿನಿಮಯ ಕೇಂದ್ರಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಪ್ರಸ್ತಾಪದ ಉದ್ದೇಶಗಳಿಗಾಗಿ, ಗೊತ್ತುಪಡಿಸಿದ ಸ್ಟಾಕ್ ಎಕ್ಸ್ಚೇಂಜ್ ಬಿಎಸ್ಇ ಆಗಿರುತ್ತದೆ.

ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್ ಮತ್ತು ಎಸ್ಬಿಐ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್ ಈ ಕೊಡುಗೆಗೆ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ಗಳಾಗಿವೆ.

ದೇಶೀಯ ಮ್ಯೂಚುಯಲ್ ಫಂಡ್ಗಳಿಂದ ಆಂಕರ್ ಹೂಡಿಕೆದಾರರ ಹಂಚಿಕೆ ಬೆಲೆ ಅಥವಾ ಅದಕ್ಕಿಂತ ಹೆಚ್ಚಿನ ಮೌಲ್ಯದ ಬಿಡ್ಗಳನ್ನು ಸ್ವೀಕರಿಸಲಾಗುತ್ತದೆ. ಆಂಕರ್ ಹೂಡಿಕೆದಾರರ ಭಾಗದಲ್ಲಿ ಕಡಿಮೆ ಚಂದಾದಾರಿಕೆ ಅಥವಾ ಹಂಚಿಕೆಯಾಗದಿದ್ದಲ್ಲಿ, ಬ್ಯಾಲೆನ್ಸ್ ಇಕ್ವಿಟಿ ಷೇರುಗಳನ್ನು ನೆಟ್ ಕಿಖಃ ಭಾಗಕ್ಕೆ ಸೇರಿಸಲಾಗುತ್ತದೆ.

ಇದಲ್ಲದೆ, ನಿವ್ವಳ ಪ್ರಸ್ತಾಪದ 15% ಕ್ಕಿಂತ ಕಡಿಮೆಯಿಲ್ಲದ ಭಾಗವು ಸಾಂಸ್ಥಿಕೇತರ ಹೂಡಿಕೆದಾರರಿಗೆ ಹಂಚಿಕೆ ಮಾಡಲು ಲಭ್ಯವಿರುತ್ತದೆ, ಅದು (ಎ) ಮೂರನೇ ಒಂದು ಭಾಗವನ್ನು 0.20 ಮಿಲಿಯನ್ಗಿಂತ ಹೆಚ್ಚು ಮತ್ತು 1 ಮಿಲಿಯನ್ ವರೆಗೆ ಅರ್ಜಿ ಗಾತ್ರ ಹೊಂದಿರುವ ಬಿಡ್ದಾರರಿಗೆ ಕಾಯ್ದಿರಿಸಲಾಗುವುದು. ಬಿಡ್ಗಳನ್ನು ಆಫರ್ ಬೆಲೆಗಿಂತ ಹೆಚ್ಚಾಗಿ ಸ್ವೀಕರಿಸಲಾಗುತ್ತದೆ ಮತ್ತು ನಿವ್ವಳ ಪ್ರಸ್ತಾಪದ 35% ಕ್ಕಿಂತ ಕಡಿಮೆಯಿಲ್ಲ ಸೆಬಿ ಐಸಿಡಿಆರ್ ನಿಯಮಗಳಿಗೆ ಅನುಸಾರವಾಗಿ ವೈಯಕ್ತಿಕ ಬಿಡ್ದಾರರಿಗೆ ಹಂಚಿಕೆ ಮಾಡಲು ಲಭ್ಯವಿರುತ್ತದೆ, ಬಿಡ್ಗಳಿಗೆ ಒಳಪಟ್ಟು ಅಥವಾ ಮೇಲಿನ ಬೆಲೆಯಲ್ಲಿ ಸ್ವೀಕರಿಸಲಾಗುತ್ತದೆ.

ಪ್ರಾಥಮಿಕ ಶಿಕ್ಷಣ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಬೇಕು: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

ಹಿರೇಬಾಗೇವಾಡಿ: ಜೀವನದಲ್ಲಿ ಎಲ್ಲದಕ್ಕಿಂತ ಶ್ರೇಷ್ಠದಾನ ವಿದ್ಯಾದಾನ. ಪ್ರಾಥಮಿಕ ಶಿಕ್ಷಣ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಬೇಕು. ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಬಿ.ಕೆ.ಇಟಗಿ ಶಿಕ್ಷಣ ಸಂಸ್ಥೆ ಜಿಲ್ಲೆಯಾದ್ಯಂತ ಹೆಸರುವಾಸಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

ಹಿರೇಬಾಗೇವಾಡಿ ಗ್ರಾಮದ ಗ್ರೂಪ್ ವಿದ್ಯಾವರ್ಧಕ ಸಂಘ, ಕರ್ನಾಟಕ ಸಂಯುಕ್ತ ಪದವಿಪೂರ್ವ ಕಾಲೇಜು, ಕರ್ನಾಟಕ ಬಾಲನಿಕೇತನ ಕನ್ನಡ ಪ್ರಾಥಮಿಕ ಶಾಲೆ, ಬಿ.ಕೆ.ಇಟಗಿ ರಾಷ್ಟ್ರೀಯ ಇಂಗ್ಲೀಷ್ ಮಿಡಿಯಂ ಸ್ಕೂಲ್ ಇವರ ಸಂಯುಕ್ತಾಶ್ರಯದಲ್ಲಿ ನಡೆದ ವಾರ್ಷಿಕ ಸ್ನೇಹ ಸಮ್ಮೇಳನ 2023–24 ಹಾಗೂ ಸನ್ಮಾನ ಮತ್ತು ಪುರಸ್ಕಾರ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಶಾಲಾಮಕ್ಕಳ ಬಗ್ಗೆ ಆಡಳಿತ ಮಂಡಳಿ ತೆಗೆದುಕೊಳ್ಳುವ ಕಾಳಜಿ ನಿಜಕ್ಕೂ ಮೆಚ್ಚುವಂಥದ್ದು ಎಂದರು.

ಮಕ್ಕಳ ಭವಿಷ್ಯದ ಬಗ್ಗೆ ಸದಾಚಿಂತಿಸುವ ಆಡಳಿತ ಮಂಡಳಿ ನಿರ್ದೇಶಕರು, ವೈಯಕ್ತಿಕವಾಗಿ ಶಾಲೆಗೆ ಬಗ್ಗೆ ಉತ್ತಮ ಅಭಿಪ್ರಾಯ ಹೊಂದಿದ್ದೇನೆ. ಇಲ್ಲಿ ಓದುವ ಮಕ್ಕಳ ಭವಿಷ್ಯ ಉಜ್ವಲವಾಗಿರಲಿ. ಮುಂದಿನ ದಿನಗಳಲ್ಲೂ ಶಾಲೆ ಇನ್ನು ಚೆನ್ನಾಗಿ ನಡೆಯಲಿ ಎಂದು ಸಚಿವರು ಹಾರೈಸಿದರು.

ಸಮಾರಂಭದಲ್ಲಿ ಗ್ರಾಮದ ಹಿರಿಯರು, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಸುರೇಶ ಇಟಗಿ, ಸಿ ಸಿ ಪಾಟೀಲ ಅಣ್ಣ, ಬಿ.ಜಿ.ವಾಲಿಇಟಗಿ, ಶ್ರೀಮತಿ ಪುಷ್ಪಾವತಿ ನಾಯ್ಕರ್, ಎಸ್.ಸಿ.ಓಂಕಾರಿ, ಉಳವಪ್ಪ ನಂದಿ, ರಮೇಶ ಬಸರಕೊಡ್, ಆಯ್.ಬಿ.ಅರಳಿಕಟ್ಟಿ, ವಾಯ್. ಎಲ್.ಪಾಟೀಲ, ಗೊದಮ್ಮ ಭರಮನಿ, ದಯಾನಂದ ಹಂಚಿನಮನಿ, ಶಿವನಾಯ್ಕ ನಾಯ್ಕರ್, ಶಿವಲಿಂಗ ಗುಂಧಾನಿ, ಪಿ.ಎಸ್. ಕಳಸದ, ಎಂ.ಕೆ.ಕರಿದಾವಲ್, ಆನಂದ ಕಳಸದ, ಆನಂದ ಶಿರಕೋಳ, ಗೌಸಮೊದ್ದಿನ ಜಾಲಿಕೊಪ್ಪ, ಶ್ರೀಕಾಂತ ಮಾದುಭರಮಣ್ಣವರ, ಅಡಿವೇಶ್ ಇಟಗಿ, ಯಲ್ಲಪ್ಪ ಕೆಳಗೇರಿ, ಸೈಯದ್ ಸನದಿ, ಗೌಡಪ್ಪ ಹಾದಿಮನಿ, ಸಲೀಂ ಸತ್ತಿಗೇರಿ, ಹಾಗೂ ಶಿಕ್ಷಣ ಸಂಸ್ಥೆಯ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಫೆ.07 ರಂದು ವಿವಿಧ ಮಹನೀಯರ ಜಯಂತಿ ಆಚರಣೆ ಪೂರ್ವಭಾವಿ ಸಭೆ

ಬಳ್ಳಾರಿ: ಜಿಲ್ಲಾಡಳಿತದಿಂದ ಫೆ.15 ರಂದು ಶ್ರೀ ಸಂತ ಸೇವಾಲಾಲ್ ಜಯಂತಿ, ಫೆ.16 ರಂದು ಸವಿತಾ ಮಹರ್ಷಿ ಜಯಂತಿ, ಫೆ.19 ರಂದು ಛತ್ರಪತಿ ಶಿವಾಜಿ ಜಯಂತಿ ಮತ್ತು ಫೆ.20 ರಂದು ಸರ್ವಜ್ಞ ಜಯಂತಿ ಕಾರ್ಯಕ್ರಮ ಆಚರಣೆ ಸಂಬಂಧ ಫೆ.07 ರಂದು ಮಧ್ಯಾಹ್ನ 03.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

ಫೆ.07 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ: ನಗರ ಜೆಸ್ಕಾಂ ಉಪವಿಭಾಗ–2 ರ ಎಫ್–73 ಫೀಡರ್ ವ್ಯಾಪ್ತಿಯಲ್ಲಿ ಸ್ಟ್ರೀಟ್ ಲೈಟ್ ಫೇಸ್ ಲೈನ್ ಅಳವಡಿಸುವ ಕಾಮಗಾರಿ ಕೈಗೆತಿಕೊಳ್ಳುತ್ತಿರುವುದರಿಂದ ಫೆ.07 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ಬಸವನಕುಂಟೆ, ಕೋಟೆ ಪ್ರದೇಶ, 1 ನೇ ಗೇಟ್, 2 ನೇ ಗೇಟ್, ಸಿದ್ದಾರ್ಥ ನಗರ, ಸುಧಾಕ್ರಾಸ್ ಮತ್ತು ಒ.ಪಿ.ಡಿ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ನಗರ ಜೆಸ್ಕಾಂ ಉಪವಿಭಾಗ–2 ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅಶೋಕ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೃಷಿ ವಿದ್ಯಾರ್ಥಿಗಳಿಂದ ಅಜೋಲಾ ಸಸ್ಯದ ಕೃಷಿ ಪ್ರಾತ್ಯಕ್ಷಿಕೆ

ಗೋಕಾಕ: ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದಡಿಯಲ್ಲಿ ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಂದ ಅಜೋಲಾ ಸಸ್ಯದ ಕೃಷಿ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಕರಕುಚ್ಚಿ ಗ್ರಾಮದಲ್ಲಿ ಮಾಡಿದರು.

ಕರ್ನಾಟಕ ಸರಕಾರ; ಗ್ಯಾರಂಟಿ ಸರಕಾರ

ಪಂಚ ಗ್ಯಾರಂಟಿಗಳ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು: ಸಚಿವ ಸತೀಶ ಜಾರಕಿಹೊಳಿ

ಬೆಳಗಾವಿ: ಸರ್ಕಾರದ ಐದು ಗ್ಯಾರಂಟಿಗಳ ಮೂಲಕ ಬಡ ಹಾಗೂ ಮಧ್ಯಮ ವರ್ಗದ ಜನರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಸರಕಾರ ಕ್ರಮ ಕೈಗೊಂಡಿದೆ. ಗೃಹಲಕ್ಷ್ಮೀ ಸೇರಿದಂತೆ ಪಂಚ ಗ್ಯಾರಂಟಿ ಮೂಲಕ ನೀಡಲಾಗಿರುವ ಆರ್ಥಿಕ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಆಶ್ರಯದಲ್ಲಿ ನಗರದ ಸರದಾರ ಹೈಸ್ಕೂಲ್ ಮೈದಾನದಲ್ಲಿ ಸೋಮವಾರ(ಫೆ.5) ನಡೆದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅನೇಕ ಕಷ್ಟಗಳ ನಡುವೆಯೂ ಪ್ರತಿವರ್ಷ 60 ಸಾವಿರ ಕೋಟಿ ರೂಪಾಯಿಗಳನ್ನು ಬಡವರ ಕಲ್ಯಾಣಕ್ಕೆ ಸರಕಾರ ಖರ್ಚು ಮಾಡುತ್ತಿದೆ. ಮುಂಬರುವ ದಿನಗಳಲ್ಲಿ ಹೊಸ ಆಸ್ಪತ್ರೆ, ಶಾಲೆಗಳು ಮತ್ತು ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಿದೆ. ಜಿಲ್ಲೆಯಲ್ಲಿ ಅತ್ಯುತ್ತಮ ರಸ್ತೆಗಳ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ವಿವಿಧ ಸೌಲಭ್ಯಗಳನ್ನು ಕಲ್ಪಿಸಲು ಭರವಸೆ:

ಇದಲ್ಲದೇ ಕೆರೆ ತುಂಬುವ ಯೋಜನೆ ಅನುಷ್ಠಾನ, ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ, ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ಶೀಘ್ರದಲ್ಲಿಯೇ ಆರಂಭಗೊಳ್ಳಲಿದೆ. ಗ್ಯಾರಂಟಿ ಯೋಜನೆ ಮೂಲಕ ಉಳಿತಾಯವಾಗುವ ಹಣವನ್ನು ಫಲಾನುಭವಿಗಳು ತಮ್ಮ ಮಕ್ಕಳ ಶಿಕ್ಷಣ ಸೇರಿದಂತೆ ಒಳ್ಳೆಯ ಕೆಲಸಕ್ಕೆ ಬಳಸಿಕೊಳ್ಳಬೇಕು. ತಮ್ಮ ಬಗ್ಗೆ ಸರಕಾರ ಹೊಂದಿರುವ ಕಾಳಜಿಯನ್ನು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಮನೆ ಮನೆಗೆ ತಲುಪಿಸಬೇಕು. ಬಡವರ ಮಕ್ಕಳಿಗೆ ಧ್ವಜ ನೀಡುವವರ ಮಕ್ಕಳು ವಿದೇಶಗಳಲ್ಲಿ ಉನ್ನತ ವ್ಯಾಸಾಂಗ ಮಾಡುತ್ತಾರೆ. ಆದ್ದರಿಂದ ಇಂತಹ ಹುನ್ನಾರಗಳ ಬಗ್ಗೆ ಜನರು ಎಚ್ಚರಿಕೆ ವಹಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಕರೆ ನೀಡಿದರು.

ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಗೃಹಲಕ್ಷ್ಮೀ ಯೋಜನೆ ಜಾರಿ:

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಮಾತನಾಡಿ, ಗ್ಯಾರಂಟಿ ಯೋಜನೆ ಅನುಷ್ಠಾನದಿಂದ ರಾಜ್ಯ ದಿವಾಳಿ ಆಗಲಿದೆ ಎಂದು ಟೀಕಿಸಿದವರೇ ಇಂದು ಪಂಚ ಗ್ಯಾರಂಟಿ ಯೋಜನೆಯ ಫಲವನ್ನು ಅನುಭವಿಸುತ್ತಿರುವುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಗೃಹಲಕ್ಷ್ಮೀ ಯೋಜನೆಯಡಿ ಪ್ರತಿವರ್ಷಕ್ಕೆ ಕುಟುಂಬದ ಯಜಮಾನಿಯರಿಗೆ 24 ಸಾವಿರ ರೂಪಾಯಿ ನೀಡುವ ಮೂಲಕ ಬಡವರಿಗೆ ನೇರವಾಗಿ ಸಹಾಯ ಹಸ್ತವನ್ನು ನೀಡಿದೆ. ಮನೆಯ ಯಜಮಾನಿಯರ ಆರ್ಥಿಕ ಸಬಲೀಕರಣಕ್ಕೆ ಸರಕಾರ ಮುಂದಾಗಿದೆ. ಬೆಳಗಾವಿ ಜಿಲ್ಲೆಯೊಂದರಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು 212 ಕೋಟಿ ರೂಪಾಯಿ ನೀಡುತ್ತಿರುವುದು ಕಡಿಮೆಯಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗ್ಯ ಯೋಜನೆಗಳ ಸರದಾರ:

ರಾಜ್ಯದಲ್ಲಿ ಸರ್ಕಾರ ಬಂದ ನಂತರ ಜನರ ಕಷ್ಟಗಳಿಗೆ ನಿರಂತರ ಸ್ಪಂದಿಸಿದೆ. ಮುಖ್ಯಮಂತ್ರಿಗಳು ಪಂಚ ಗ್ಯಾರಂಟಿಗಳನ್ನು ಯೋಜನೆಗಳನ್ನು ಅನುಷ್ಠಾನಗೊಳಿಸಿದ ಭಾಗ್ಯ ಯೋಜನೆಗಳ ಸರದಾರ ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ. ಮಧ್ಯಮ ವರ್ಗದ ಕುಟುಂಬಗಳಿಗೆ, ರೈತಾಪಿ ವರ್ಗದ ಜನರಿಗೆ ಈ ಯೋಜನೆಗಳು ಸಹಾಯವಾಗಿವೆ. ಮಹಿಳಾ ಆರ್ಥಿಕ ಸಬಲೀಕರಣಕ್ಕೆ ಗೃಹ ಲಕ್ಷ್ಮೀ ಯೋಜನೆ ಜಾರಿಗೆ ತರಲಾಗಿದೆ.

ಚುನಾವಣೆ ವೇಳೆ ನೀಡಿದ ವಚನವನ್ನು ಪಾಲಿಸುವ ಮೂಲಕ ಬಡವರ ಪರ ಇರುವುದನ್ನು ಸಾಬೀತು ಪಡಿಸಿದ್ದೇವೆ. ಮುಂಬರುವ ದಿನಗಳಲ್ಲೂ ಸರಕಾರದ ಕೈಬಿಡುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಮುಂಬರುವ ದಿನಗಳಲ್ಲಿ ಅಂಗನವಾಡಿ, ಆಶಾ ಕಾರ್ಯಕರ್ತೆಯರ ಗೌರವಧನವನ್ನು ಹೆಚ್ಚಳ ಮಾಡಲು ಸರಕಾರ ಬದ್ಧವಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಅವರು ಹೇಳಿದರು.

ನುಡಿದಂತೆ ನಡೆದ ಸರ್ಕಾರ; ಜನಪರ ಯೋಜನೆಗಳ ಅನುಷ್ಠಾನ:

ಚುನಾವಣಾ ಪೂರ್ವದಲ್ಲಿ ಮನೆಮನೆಗೆ ತೆರಳಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರ ಸಹಿ ಹೊಂದಿರುವ ಗ್ಯಾರಂಟಿ ಕಾರ್ಡುಗಳನ್ನು ನೀಡಲಾಗಿತ್ತು. ನಾವು ನೀಡಿದ ಅನ್ನಭಾಗ್ಯ, ಶಕ್ತಿ, ಗೃಹಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ ಪಂಚ ಗ್ಯಾರಂಟಿ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ಬೆಳಗಾವಿ ಉತ್ತರ ಶಾಸಕ ಆಸಿಫ್(ರಾಜು) ಸೇಠ್ ಹೇಳಿದರು.

ಗ್ಯಾರಂಟಿ ಅನುಷ್ಠಾನ ಮತ್ತು ಹಣ ಹೊಂದಾಣಿಕೆ ಬಗ್ಗೆಯೂ ಬಹಳಷ್ಟು ಜನರಿಗೆ ಸಂದೇಹವಿತ್ತು. ಆದರೆ ಜನರ ಹಣವನ್ನು ಜನರಿಗೆ ಗ್ಯಾರಂಟಿ ಯೋಜನೆಯ ಮೂಲಕ ಯಶಸ್ವಿಯಾಗಿ ತಲುಪಿಸಲಾಗಿದೆ. ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳನ್ನು ಐದು ವರ್ಷಗಳ ಕಾಲ ನೀಡಲಾಗುವುದು. ನಾವು ನೀಡಿದ ವಚನ ಪಾಲಿಸುತ್ತೇವೆ. ಈ ಬಗ್ಗೆ ಯಾವುದೇ ಸಂದೇಹ ಬೇಡ ಎಂದು ಶಾಸಕ ಸೇಠ್ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ್ ಹಟ್ಟಿಹೊಳಿ ಮಾತನಾಡಿ ಚುನಾವಣಾ ಸಂದರ್ಭದಲ್ಲಿ ನೀಡಲಾದ ಭರವಸೆಗಳನ್ನು ಚಾಚೂತಪ್ಪದೇ ಅನುಷ್ಠಾನಗೊಳಿಸಲಾಗಿದೆ. ಐದೂ ಗ್ಯಾರಂಟಿ ಯೋಜನೆಗಳನ್ನು ಹಂತ ಹಂತವಾಗಿ ಅತ್ಯಂತ ಕಡಿಮೆ ಕಾಲಾವಧಿಯಲ್ಲಿ ಜಾರಿಗೆ ತರಲಾಗಿದೆ. ಗ್ಯಾರಂಟಿ ಯೋಜನೆ ವಿರೋಧಿಸಿದವರು ಈಗ ಲೋಕಸಭಾ ಚುನಾವಣೆ ಬಂದಿರುವುದರಿಂದ ತಾವೂ ಗ್ಯಾರಂಟಿ ಘೋಷಿಸುತ್ತಿರುವುದು ಕರ್ನಾಟಕ ಸರಕಾರಕ್ಕೆ ಸಂದ ಗೆಲುವು ಆಗಿದೆ ಎಂದರು.

ಪ್ರತಿವರ್ಷ 60 ಸಾವಿರ ಕೋಟಿ ರೂಪಾಯಿಗಳನ್ನು ಗ್ಯಾರಂಟಿ ಯೋಜನೆಗೆ ಖರ್ಚು ಮಾಡುವ ಮೂಲಕ ಜನರಿಗೆ ಅನುಕೂಲ ಕಲ್ಪಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಮಾತ್ರ ಇದು ಸಾಧ್ಯ ಎಂದು ಚನ್ನರಾಜ್ ಅಭಿಪ್ರಾಯಪಟ್ಟರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ; ಜಿಲ್ಲೆಗೆ ಪ್ರಥಮ ಸ್ಥಾನ:

ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ ಮಾತನಾಡಿ, ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಸರ್ಕಾರ ಸಂಪೂರ್ಣ ಯಶಸ್ವಿಯಾಗಿದೆ. ಅದರ ಕುರಿತು ಜನ ಸಾಮಾನ್ಯರಿಂದ ಯಾವುದೇ ಒಂದು ದೂರು ಕೂಡ ಬಂದಿಲ್ಲ. ಯೋಜನಾ ಅನುಷ್ಠಾನದಲ್ಲಿ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ ಎಂದು ಅವರು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹ ಜ್ಯೋತಿ, ಯುವನಿಧಿ, ಶಕ್ತಿ ಯೋಜನೆ ಹೀಗೆ ಐದು ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನಗೊಂಡಿವೆ.

ಜಿಲ್ಲೆಯಲ್ಲಿ ಸುಮಾರು 10.64 ಲಕ್ಷ ಫಲಾನುಭವಿಗಳ ನೇರವಾಗಿ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಮಾಡುವುದರ ಮೂಲಕ ಯೋಜನೆ ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ ಎಂದು ಹೇಳಿದರು.

ಫಲಾನುಭವಿಗಳ ಅನಿಸಿಕೆಗಳು:

1. ಗೃಹಲಕ್ಷ್ಮೀ ಯೋಜನೆಯಿಂದ ಮನೆಯಲ್ಲಿರುವ ಮಹಿಳೆಯರಿಗೆ ಆರೋಗ್ಯ ವೆಚ್ಚ ಸೇರಿದಂತೆ ಸಣ್ಣಪುಟ್ಟ ಖರ್ಚು ವೆಚ್ಚಗಳನ್ನು ನಿಭಾಯಿಸಲು ಅನುಕೂಲವಾಗಿದೆ ಎಂದು ಗೃಹಲಕ್ಷ್ಮೀ ಫಲಾನುಭವಿ ವಿದ್ಯಾ ತಾನ್ಸೆ ಹೇಳಿದರು.

2. ಗೃಹಲಕ್ಷ್ಮೀ ಫಲಾನುಭವಿ ಗೀತಾ ಚಿಕ್ಕಲದಿನ್ನಿ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಿಂದ ಮನೆ ಮನೆಗೆ ಲಕ್ಷ್ಮೀ ಬಂದಂತಾಗಿದೆ. ಇದರಿಂದ ಬಡ ಕುಟುಂಬದ ಮಹಿಳೆಯರಿಗೆ ಅತ್ಯಂತ ಉಪಯುಕ್ತವಾಗಿದೆ.

ಮಹಿಳೆಯರ ಕೈಗೆ ನೀಡಿದ ಹಣವು ಸದುಪಯೋಗ ಆಗುತ್ತದೆ ಎಂಬ ನಂಬಿಕೆಯಿಂದ ಮಹಿಳೆಯರಿಗೆ ಹಣ ನೀಡುತ್ತಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.

ಯಾವುದೇ ಜಾತಿ–ಧರ್ಮಗಳಿಗೆ ಸೀಮಿತವಾಗದೇ ಸರ್ವರಿಗೂ ಯೋಜನೆಯ ಲಾಭ ದೊರಕುವಂತೆ ಸರಕಾರ ಸೌಲಭ್ಯವನ್ನು ನೀಡಿದೆ. ಫಲಾನುಭವಿಗಳ ನೋಂದಣಿಗೆ ಕೂಡ ಯಾವುದೇ ರೀತಿಯ ಸಮಯ ಅಥವಾ ಕಡೆಯ ದಿನದ ನಿರ್ಬಂಧವಿಲ್ಲ.

ಯಾವುದೇ ಸಂದರ್ಭದಲ್ಲಿಯಾದರೂ ಅರ್ಹ ಮಹಿಳೆಯರು ಇದರ ಪ್ರಯೋಜನ ಪಡೆಯಬಹುದು. ಗ್ಯಾರಂಟಿ ಯೋಜನೆಯಿಂದ ಪ್ರತಿ ಕುಟುಂಬಕ್ಕೆ ಐದಾರು ಸಾವಿರ ರೂಪಾಯಿ ಉಳಿತಾಯವಾಗುತ್ತಿದೆ ಎಂದು ಗೀತಾ ಚಿಕ್ಕಲದಿನ್ನಿ ಅಭಿಪ್ರಾಯಪಟ್ಟರು.

ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸುವ ಮೂಲಕ ಸರಕಾರಕ್ಕೆ ಕೃತಜ್ಞತೆಗಳನ್ನು ಸಲ್ಲಿಸಿದರು.

ಅನ್ನಭಾಗ್ಯ ಯೋಜನೆ ಡಿಬಿಟಿ ಪೋಸ್ಟರ್ ಬಿಡುಗಡೆ:

ಅನ್ನಭಾಗ್ಯ ಯೋಜನೆಯ ಡಿಬಿಟಿ ಪೋಸ್ಟರ್‌ಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಬಿಡುಗಡೆಗೊಳಿಸಿದರು. ಇದೇ ಸಂದರ್ಭದಲ್ಲಿ ಗೃಹಲಕ್ಷ್ಮೀ ಯೋಜನೆಯ ಫಲಾನಿಭವಿಗಳಿಗೆ ಚೆಕ್ ವಿತರಿಸಲಾಯಿತು.

ಸವದತ್ತಿ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ವಿಶ್ವಾಸ ವೈದ್ಯ, ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ, ನಗರ ಪೊಲೀಸ್ ಆಯುಕ್ತ ಎಸ್.ಎನ್ ಸಿದ್ದರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಪ್ರೊಬೇಷನರಿ ಐಎಎಸ್ ಅಧಿಕಾರಿ ಶುಭಂ ಶುಕ್ಲಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಜಿಲ್ಲಾ ನಗಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ನಗರ ಸೇವಕರು, ಜನ ಪ್ರತಿನಿಧಿಗಳು, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ದೇಶದಲ್ಲಿಯೇ ಅಪೂರ್ವವಾಗಿರುವ ಕರ್ನಾಟಕ ರಾಜ್ಯ ಸರಕಾರದ ಮಹತ್ವಾಕಾಂಕ್ಷಿ "ಪಂಚ ಗ್ಯಾರಂಟಿ" ಯೋಜನೆಗಳ ಫಲಾನುಭವಿಗಳ ಸಮಾವೇಶವು ಸಾವಿರಾರು ಜನರ ಹರ್ಷೋದ್ಗಾರಗಳ ನಡುವೆ ಅತ್ಯಂತ ಯಶಸ್ವಿಯಾಗಿ ನಡೆಯಿತು. ನಗರ ಸೇರಿದಂತೆ ವಿವಿಧ ತಾಲ್ಲೂಕುಗಳ ಸಾವಿರಾರು ಫಲಾನುಭವಿಗಳು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಲಿಂಗರಾಜ ಕಾಲೇಜಿಗೆ ಅತ್ಯುತ್ತಮ ಎನ್‌ಸಿಸಿ ಘಟಕ ಪ್ರಶಸ್ತಿ

ಬೆಳಗಾವಿ: ಬೆಂಗಳೂರಿನ ಕ್ರೈಸ್ತ ಯುನಿವರ್ಸಿಟಿಯಲ್ಲಿ ಜರುಗಿದ ಸಮಾರಂಭದಲ್ಲಿ ಕರ್ನಾಟಕ ಮತ್ತು ಗೋವಾ ಎನ್‌ಸಿಸಿ ನಿರ್ದೇಶನಾಲಯವು 2023–24ನೇ ಸಾಲಿನ ಅತ್ಯುತ್ತಮ ಎನ್‌ಸಿಸಿ ಘಟಕ ಪ್ರಶಸ್ತಿಯನ್ನು ಲಿಂಗರಾಜ ಕಾಲೇಜಿಗೆ ನೀಡಿ ಗೌರವಿಸಿದೆ.

23–24ನೇ ಸಾಲಿನಲ್ಲಿ ಕಾಲೇಜಿನ ಎನ್‌ಸಿಸಿ ಘಟಕದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಜರುಗಿದ ವಿವಿಧ ಶಿಬಿರಗಳಲ್ಲಿ ಆಯ್ಕೆಯಾಗಿ, ಪಾಲ್ಗೊಂಡು ಅದ್ವಿತೀಯ ಸಾಧನೆಯನ್ನು ಮಾಡಿದ್ದಾರೆ. ಮಾತ್ರವಲ್ಲದೆ ರಾಷ್ಟ್ರಮಟ್ಟದಲ್ಲಿ ಪದಕಗಳನ್ನು ಪಡೆದಿದ್ದಾರೆ. ಹಲವು ಎನ್‌ಸಿಸಿ ಕೆಡೆಟ್‌ಗಳು ಅಗ್ನಿವೀರ ಮೊದಲ್ಗೊಂಡು ಶಸಸ್ತ್ರಪಡೆಗೆ ಆಯ್ಕೆಯಾಗಿ

ರಾಷ್ಟ್ರಸೇವೆಗೆ ತೊಡಗಿದ್ದಾರೆ. ಇದರೊಂದಿಗೆ ರಕ್ತದಾನ ಶಿಬಿರ, ಸ್ವಚ್ಛತಾ ಅಭಿಯಾನ, ವನ ಮಹೋತ್ಸವ, ವೃದ್ಧಶ್ರಾಮ ಭೇಟಿ, ಕ್ಯಾನ್ಸರ್, ಎಡ್ಸ್‌ತಡೆ ಗಟ್ಟುವ ನಿಟ್ಟಿನಲ್ಲಿ ಜನಜಾಗೃತಿ ಅಭಿಯಾನಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡು ಕಾರ್ಯನಿರ್ವಹಿಸಿದ್ದಾರೆ. ಹೀಗೆ ತಮ್ಮ ರಚನಾತ್ಮಕ ಹಾಗೂ ಸೃಜನಾತ್ಮಕ ಕಾರ್ಯಗಳಿಂದ ಮಾದರಿಯೆನಿಸಿರುವ ಲಿಂಗರಾಜ ಕಾಲೇಜಿನ ಎನ್‌ಸಿಸಿ ಘಟಕದ ಕೊಡುಗೆಯನ್ನು ಪರಿಶೀಲಿಸಿದಕರ್ನಾಟಕ ಮತ್ತು ಗೋವಾ ಎನ್‌ಸಿಸಿ ನಿರ್ದೇಶನಾಲಯವು ಲಿಂಗರಾಜ ಕಾಲೇಜಿಗೆ ಅತ್ಯುತ್ತಮ ಎನ್‌ಸಿಸಿ ಘಟಕ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ.

ಈ ಸಂದರ್ಭದಲ್ಲಿ ಮಾಜಿ ಮಾಜಿ ಉಪನಿರ್ದೇಶಕ ಏರ್ ಕಮಾಡೋರ್ ಬಿ.ಎಸ್.ಕನ್ವರ್, ಉಸ್ತುವಾರಿ ನಿರ್ದೇಶಕರಾದ ಕರ್ನಲ್ ಬಸಂತ್‌ಸಿಂಗ್ ಲಿಂಗರಾಜ ಕಾಲೇಜಿನ ಎನ್‌ಸಿಸಿ ಅಧಿಕಾರಿ ಕ್ಯಾಪ್ಟನ್ ಡಾ.ಮಹೇಶ ಗುರನಗೌಡರ, ಹಿರಿಯ ಪ್ರಾಧ್ಯಾಪಕ ಪ್ರೊ.ಸಿ ಮಲ್ಲಣ್ಣ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಕಾಲೇಜಿನ ಈ ಸಾಧನೆಗೆ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆ, 26 ಕರ್ನಾಟಕ ಎನ್‌ಸಿಸಿ ಬಟಾಲಿಯನ್ ಕಮಾಂಡರ್ ಕರ್ನಲ್ ಎಸ್.ದರ್ಶನ, ಕರ್ನಲ್ ಶಂಕರ ಯಾದವ್, ಕೆಎಲ್‌ಇ ಜಂಟಿ ಕಾರ್ಯದರ್ಶಿಗಳಾದ ಡಾ.ಪ್ರಕಾಶ ಕಡಕೋಳ, ಪ್ರಾಚಾರ್ಯ ಡಾ.ಎಚ್. ಎಸ್.ಮೇಲಿನಮನಿ, ಪಿಯು ಪ್ರಾಚಾರ್ಯ ಗಿರಿಜಾ ಹಿರೇಮಠ, ಸುಬೇದಾರ ಮೇಜರ್‌ಕಲ್ಲಪ್ಪಾ ಪಾಟೀಲ ಹಾಗೂ ಸಿಬ್ಬಂದಿವರ್ಗದವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಮದುವೆ ಮಾಡದಿದ್ದಕ್ಕೆ ಹೆತ್ತ ತಾಯಿಯನ್ನೇ ಕೊಲೆಗೈದ ಮಗ

ಕಲಬುರಗಿ: ಮದುವೆ ಮಾಡಿಲ್ಲ ಎಂದು ಹೆತ್ತ ತಾಯಿಯನ್ನೇ ಮಗ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಪೋಚಾವರಂನಲ್ಲಿ ನಡೆದಿದೆ.

ಶೋಭಾ (45) ಮಗನಿಂದ ಕೊಲೆಯಾದ ತಾಯಿ. ಮಗ ಅನಿಲ್ ಮನೆಗೆ ಕುಡಿದು ಬಂದಿದ್ದು, ಕುಡಿದ ನಶೆಯಲ್ಲಿ ಮದುವೆ ಬಗ್ಗೆ ಮಾತನಾಡಿ ತಾಯಿಯೊಂದಿಗೆ ಜಗಳವಾಡಿದ್ದಾನೆ.

ಇನ್ನಷ್ಟು ಕೋಪಗೊಂಡ ಅನಿಲ್ ತನಗೆ ಏಕೆ ಮದುವೆ ಮಾಡಿಸಿಲ್ಲ ಎಂದು ತಾಯಿಗೆ ಪ್ರಶ್ನೆ ಮಾಡಿದ್ದಾನೆ. ಬಳಿಕ ಕುಡಿದ ನಶೆಯಲ್ಲಿ ಅಲ್ಲೇ ಇದ್ದ ಕಟ್ಟಿಗೆಯಿಂದ ಕೊಡೆದು ಕೊಲೆ ಮಾಡಿದ್ದಾನೆ.

ಘಟನೆ ಕುರಿತು ಚಿಂಚೋಳಿಯ ಕುಂಚಾವರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಅನಿಲ್‌ನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಕೌಶಲ್ಯ ಆಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆಯ ವತಿಯಿಂದ 18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಫೆಬ್ರವರಿ ತಿಂಗಳಿನಲ್ಲಿ ಆರಂಭವಾಗುವ ಸೊಲಾರ್ ಟೆಕ್ನಿಷಿಯನ್ ಮತ್ತು ಜೆಸಿಬಿ ಅಪರೇಟರ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿ ಸಂಪೂರ್ಣ ಉಚಿತವಾಗಿದ್ದು, ತರಬೇತಿ